ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com | ಸಂಪುಟ: 01 ಸಂಚಿಕೆ: 196

ಬೆಲೆ ರೂ : 2.00

ರಾಯಚೂರು

ಪುಟ: 4



ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793



KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 14–07–2026


## ಕೆಪಿಎಸ್‌ಸಿ ಅಧ್ಯಕ್ಷರ ಅಮಾನತು: ಪ್ರಭುದೇವ್ ಹಂಗಾಮಿ ಅಧ್ಯಕ್ಷ




**ಬೆಂಗಳೂರು, ಜು.13–** ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದ ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ಅವರನ್ನು ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ತಕ್ಷಣದಿಂದಲೇ ಜಾರಿಗೆ ಬರುವಂತೆ ಅಮಾನತುಗೊಳಿಸಿ ರಾಜ್ಯಪಾಲರು ಆದೇಶ ಹೊರಡಿಸಿ, ಆರೋಪಗಳ ಕುರಿತು ಸುಪ್ರೀಂಕೋರ್ಟ್ ತನಿಖೆ ನಡೆಸುವಂತೆ ರಾಷ್ಟ್ರಪತಿಗಳಿಗೆ ಶಿಫಾರಸ್ಸು ಮಾಡಿದ್ದಾರೆ.

ಪುತ್ರಿಗೆ ಸರ್ಕಾರಿ ಹುದ್ದೆ ಗಿಟ್ಟಿಸಿಕೊಳ್ಳಲು ಅಧಿಕಾರ ದುರುಪಯೋಗಪಡಿಸಿಕೊಂಡು ಕುಟುಂಬದ ವಾರ್ಷಿಕ ಆದಾಯ ಪ್ರಮಾಣ ಪತ್ರದಲ್ಲಿ ಸುಳ್ಳು ಆದಾಯ ನಮೂದಿಸಲು ಸಹಕರಿಸಿದ ಆರೋಪ ಎದುರಿಸುತ್ತಿರುವ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತು ಮಾಡಿ ಹಿರಿಯ ಸದಸ್ಯ ಟಿ. ಪ್ರಭುದೇವ್ ಅವರನ್ನು ಹಂಗಾಮಿ ಅಧ್ಯಕ್ಷರನ್ನಾಗಿ ನೇಮಕ ಮಾಡಿ, ರಾಜ್ಯಪಾಲರು ಅಧಿಸೂಚನೆ ಹೊರಡಿಸಿದ್ದಾರೆ.

ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಶಿವಶಂಕರಪ್ಪ ಅವರ ವಿರುದ್ಧ ಸ್ವಜನ ಪಕ್ಷಪಾತ, ಮಾಹಿತಿಯನ್ನು ಬಹಿರಂಗಪಡಿಸದೇ ಇರುವುದು ಇತ್ಯಾದಿ ದೂರುಗಳು ಬಂದಿದ್ದು, ಅವರ ಪುತ್ರಿಯನ್ನು ಅಧಿಕಾರ ದುರುಪಯೋಗಪಡಿಸಿಕೊಂಡು ಕಾನೂನುಬಾಹಿರವಾಗಿ ಕೈಗಾರಿಕಾ ವಿಸ್ತರಣಾ ಅಧಿಕಾರಿ ಹುದ್ದೆಗಳಿಗೆ ಆಯ್ಕೆ ಮಾಡಲು ಅನುಕೂಲ ಮಾಡಿಕೊಟ್ಟಿದ್ದಕ್ಕಾಗಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ. ಅವರ ನೇರ ಅವಲಂಬಿತರು ಕೆಪಿಎಸ್‌ಸಿ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದಾಗ ಅಧ್ಯಕ್ಷರು ತಾವು ಈ ನೇಮಕಾತಿ ಪ್ರಕ್ರಿಯೆಯಿಂದ ದೂರವಿರಲು ಅಥವಾ ಹಿತಾಸಕ್ತಿ ಸಂಘರ್ಷವನ್ನು ಔಪಚಾರಿಕವಾಗಿ ಘೋಷಿಸಲು ವಿಫಲರಾಗಿದ್ದಾರೆ ಎಂದು ಸ್ಪಷ್ಟವಾಗಿ ಕಂಡು ಬಂದಿದೆ ಎಂದು ರಾಜ್ಯಪಾಲರ ಕಚೇರಿ ಪ್ರಕಟಣೆ ತಿಳಿಸಿದೆ.

ಇದಲ್ಲದೆ ಕುಟುಂಬದ ವಾರ್ಷಿಕ ಆದಾಯವನ್ನು ಕೇವಲ 40 ಸಾವಿರ ಎಂದು ಘೋಷಿಸಿ ಪ್ರಮಾಣ ಪತ್ರ ಪಡೆದಿದ್ದು, ವಾಸ್ತವ ಆದಾಯವನ್ನು ಮರೆಮಾಚಿ ಒಬಿಸಿ ಮೀಸಲಾತಿ ಮತ್ತು ಕೆನೆ ಪದರ ಲಾಭ ಪಡೆಯಲು ಯತ್ನಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಸರ್ಕಾರದ ಆದೇಶದ ಪ್ರಕಾರ ಅವರ ಮಕ್ಕಳಿಗೆ ಒಬಿಸಿ ಮೀಸಲಾತಿ ಅನ್ವಯಿಸದಿದ್ದರೂ ಮಾಹಿತಿ ಮರೆಮಾಚಿ ಮೀಸಲಾತಿಯ ಪ್ರಯೋಜನ ಪಡೆಯಲು ಪ್ರಯತ್ನಿಸುತ್ತಿರುವ ಆರೋಪವೂ ದಾಖಲಾಗಿದೆ.

ಆದಾಯ, ಆಸ್ತಿ ವಿವರಗಳು ಸೇರಿದಂತೆ ಲಭ್ಯ ದಾಖಲೆಗಳು ಆರೋಪಗಳಿಗೆ ಪ್ರಾಥಮಿಕ ಬಲ ನೀಡುತ್ತಿದ್ದು, ಈ ಆರೋಪಗಳು ದುರ್ನಡತೆಗೆ ಸಮನಾಗಿದೆ ಎಂದು ರಾಜ್ಯಪಾಲರು ಅಭಿಪ್ರಾಯಪಟ್ಟಿದ್ದಾರೆ. ನಿಷ್ಪಕ್ಷಪಾತ ತನಿಖೆ ನಡೆಸುವ ಉದ್ದೇಶದಿಂದ ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ಶಿವಶಂಕರಪ್ಪ ಅವರನ್ನು ಅಮಾನತು ಮಾಡಲಾಗಿದೆ ಎಂದು ರಾಜ್ಯಪಾಲರ ಆದೇಶದಲ್ಲಿ ತಿಳಿಸಲಾಗಿದೆ. 2ನೇಪುಟಕ್ಕೆ

## ಸಿರವಾರದಲ್ಲಿ ಗಾನ ಕೋಗಿಲೆ ಎಸ್. ಜಾನಕಿ ಅವರಿಗೆ ಶ್ರದ್ಧಾಂಜಲಿ



ಧೈರ್ಯದ ದಾರಿ

**ಸಿರವಾರ:** ಸಿರವಾರ ಪಟ್ಟಣದ 'ದೇವದುರ್ಗ ಕ್ರಾಸ್ ಗೆಳೆಯರ ಬಳಗ' ಹಾಗೂ 'ಕನ್ನಡ ಸೇನೆ ಕರ್ನಾಟಕ ತಾಲೂಕು ಘಟಕ'ದ ವತಿಯಿಂದ, ಹಿರಿಯ ಗಾಯಕಿ ಎಸ್. ಜಾನಕಿ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮೌನೇಶ ಪಿತಗಲ್ ಅವರು, "ಕನ್ನಡದ ಗಾನ ಕೋಗಿಲೆ ಎಸ್. ಜಾನಕಿ ಅವರು ಸುಮಾರು 20 ಭಾಷೆಗಳಲ್ಲಿ 48,000ಕ್ಕೂ ಹೆಚ್ಚು ಹಾಡುಗಳನ್ನು ಹಾಡಿರುವ ಹೆಗ್ಗಳಿಕೆ ಹೊಂದಿದ್ದಾರೆ. 'ಹಾಡು ನಿಮ್ಮದು, ಭಾವ ನಮ್ಮದು' ಎನ್ನುವಂತೆ ತಮ್ಮ ಮಧುರ ಕಂಠದಿಂದ ಕೋಟ್ಯಂತರ ಜನರ ಹೃದಯ ಗೆದ್ದಿರುವ ಅಮರ ಕಂಠದ ಗಾಯಕಿ ನಮ್ಮನ್ನು ಅಗಲಿದ ಸುದ್ದಿ ಕೇಳಿ ತೀವ್ರ ದುಃಖವಾಗಿದೆ" ಎಂದು ಸಂತಾಪ ವ್ಯಕ್ತಪಡಿಸಿದರು.

ಈ ಶ್ರದ್ಧಾಂಜಲಿ ಸಭೆಯಲ್ಲಿ ನಿಂಬಯ್ಯ ಸ್ವಾಮಿ, ಶೇಖರಯ್ಯ ಸ್ವಾಮಿ, ರಮೇಶ್ ಶೆಟ್ಟಿ, ಶ್ರೀಕಾಂತ್ ಮ್ಯಾದರ್, ಉಮೇಶ್ ಜೇಗರಕಲ್, ಮೌನೇಶ ಪಿತಗಲ್, ವಕೀಲರಾದ ಮಮ್ಮದ್ ಸಿದ್ದಿ, ಎಚ್. ಚಂದ್ರಶೇಖರ್, ಹುಲಿಗೆಪ್ಪ ಮಡಿವಾಳ, ಲಾರಿ ನಾಗೇಶ್, ರಾಮು ಗಿಂಡಿ, ಅಂಬರೀಶ್ ಕನಸಾವಿ, ಮಾದೇಶ್ ನಾಯಕ್, ಅಶೋಕ ಬಡ್ಡ, ಶರಣು ನಾಯಕ್, ಆಂಜನೇಯ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ

## ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿ: ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್

ಧೈರ್ಯದ ದಾರಿ



**ರಾಯಚೂರು ಜುಲೈ 13:** ಜಿಲ್ಲೆಯಲ್ಲಿ ಕುಡಿಯುವ ನೀರು, ಘನತ್ಯಾಜ ನಿರ್ವಹಣೆ, ಕೆರೆಗಳ ಸಂರಕ್ಷಣೆ ಸೇರಿದಂತೆ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಜಿಲ್ಲೆಯ ಅಧಿಕಾರಿಗಳು ಶ್ರಮಿಸಬೇಕೆಂದು ಕರ್ನಾಟಕ ಲೋಕಾಯುಕ್ತರಾದ ಗೌರವಾನ್ವಿತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜುಲೈ 13ರ ಸೋಮವಾರ ದಂದು ರಾಯಚೂರು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಅವರು ಮಾತನಾಡಿದರು.

ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಾಲಕಾಲಕ್ಕೆ ಒದಗಿಸಲು ಸ್ವಂತ ಸುಪ್ರೀಂ ಕೋರ್ಟ್ನ ನಿರ್ದೇಶನವಿದ್ದು, ಸಂಬಂಧಿಸಿದ ಅಧಿಕಾರಿಗಳು ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು ಒದಗಿಸುವ ಮೂಲಕ ಜನರಿಗೆ ವಿವಿಧ ಸೌಲಭ್ಯಗಳನ್ನು ನೀಡುವ ವಾತಾವರಣವನ್ನು ನಿರ್ಮಾಣ ಮಾಡಲು ಅಧಿಕಾರಿಗಳು ಶ್ರಮಿಸಬೇಕು. ಜನರಿಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸಬೇಕೆಂದರು.

ಜಿಲ್ಲೆಯಲ್ಲಿ ಮರಳುಗಾರಿಕೆ, ಅರಣ್ಯ ಸಂರಕ್ಷಣೆ ಹಾಗೂ ಗ್ರಾಮೀಣ ಭಾಗದ ಅಂಗಡಿ ಹಾಗೂ ಪಾನ್ ಬೀಡಾ ಅಂಗಡಿಗಳಲ್ಲಿ ಮದ್ಯ ಮಾರಾಟದ ಕುರಿತು ನಿಗಾ ನಿರ್ವಹಿಸಬೇಕು. ಆಕ್ರಮ ಮದ್ಯ ಮಾರಾಟದ ಮೇಲೆ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಈ ಹಿಂದೆ ಸರ್ಕಾರದಿಂದ ಮಹತ್ವ ಯೋಜನೆ ಕೈಗೊಳ್ಳಲಾಗಿದೆ. ಮಳೆ ಬರದೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಆರ್.ಓ ಪಾಂಟ್ಸ್ ಸಲುವಾಗಿ ಕೋಟ್ಯಾಂತರ ರೂಪಾಯಿಗಳನ್ನು ಖರ್ಚು ಮಾಡಲಾಗಿದೆ. ಪ್ರಸ್ತುತ ಶೇ.50ರಷ್ಟು ಆರ್.ಓ ಪ್ಲಾಂಟ್‌ಗಳು ಸರಿಯಾಗಿ ನಿರ್ವಹಣೆ ಇಲ್ಲದೆ ಹಾಳಾಗಿವೆ. ಅವುಗಳನ್ನು ಸರಿಪಡಿಸಬೇಕು. ರಾಯಚೂರು ಜಿಲ್ಲೆಯ 811 ಹಳ್ಳಿಗಳ ಪೈಕಿ ಸುಮಾರು 700 ಹಳ್ಳಿಗಳಲ್ಲಿ ಆರ್.ಓ ಪ್ಲಾಂಟ್ ನೀಡಲಾಗಿದೆ. ದೇವದುರ್ಗ ಹಾಗೂ ಮಾನ್ವಿ ತಾಲ್ಲೂಕಿನ 2ನೇ ಪುಟಕ್ಕೆ

## ಮಳೆಗಾಗಿ ಆಲ್ದಾಳ ಗ್ರಾಮದಲ್ಲಿ ಸಪ್ತಭಜನೆ ಮೂಲಕ ವಿಶೇಷ ಪ್ರಾರ್ಥನೆ



ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ಆಲ್ದಾಳ ಗ್ರಾಮದ ರೈತರು ಮುಂಗಾರು ಮಳೆಯ ಅಭಾವದಿಂದಾಗಿ ಬಿತ್ತನೆಯ ಬೆಳೆಗಳು ಒಣಗಿ ಹೋಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮದ ಆರಾಧ್ಯ ದೈವ ಶ್ರೀಭದ್ರಕಾಳಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಸೋಮವಾರ ಬೆಳ್ಳಿಗೆಯಿಂದ ಮಂಗಳವಾರದವರೆಗೆ ನಿರಂತರ ಸಪ್ತಭಜನೆ ಕಾರ್ಯಕ್ರಮದ ಮೂಲಕ ಮಳೆಗಾಗಿ ವಿಶೇಷ ಪ್ರಾರ್ಥನೆ ಅರಂಭಿಸಲಾಗಿದೆ. ಸಪ್ತಭಜನೆ ಅಂಗವಾಗಿ ಆಲ್ದಾಳ ಗ್ರಾಮದ ಆರಾಧ್ಯ ದೈವ ಶ್ರೀ ಭದ್ರಕಾಳಿ ವೀರಭದ್ರೇಶ್ವರ ದೇವರಿಗೆ ಹಾಗೂ ವಿವಿಧ ದೇವಸ್ಥಾನಗಳಿಗೆ ಮಕ್ಕಳಿಂದ ತಾನುಬಿಂದಿಗೆ ನೀರು ಸಮರ್ಪಣೆ ಮೂಲಕ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಮಳೆಯ ಕೊರತೆಯಿಂದ ಬೆಳೆಗಳು ಒಣಗುವ ಸ್ಥಿತಿ ನಿರ್ಮಾಣವಾಗಿದ್ದು ಸಾವಿರಾರು ರೂಪಾಯಿ ವೆಚ್ಚ ಮಾಡಿ ಬಿತ್ತನೆ ಮಾಡಿದ ರೈತರು ಆತಂಕಗಳಾಗಿದ್ದು ಉತ್ತಮ ಮಳೆಯಾಗಲೆಂದು ದೇವರ ಮರೆ ಹೋಗಿದ್ದಾರೆ. ದೇವರ ಕೃಪೆಯಿಂದ ಶೀಘ್ರದಲ್ಲಿ ಉತ್ತಮ ಮಳೆಯಾಗಲಿವೆ ಎಂಬ ವಿಶ್ವಾಸವನ್ನು ಗ್ರಾಮಸ್ಥರು ವ್ಯಕ್ತಪಡಿಸಿದರು.

## ಏಳಿರಿ .ಎದ್ದೇಳಿರಿ. ಮತದಾರರೇ ಮತ ಪಟ್ಟಿಯಲ್ಲಿ ನಿಮ್ಮ ಹೆಸರು ಸೇರುವರಿಗೆ ನಿರಂತರ ಕ್ರಿಯಾಶೀಲರಾಗಿರಿ. ಡಾ. ಬಿರಾದಾರ

ಧೈರ್ಯದ ದಾರಿ



**ರಾಯಚೂರು:** ಜಿಲ್ಲೆಯಲ್ಲಿ ಎಸ್‌ಐಆರ್ ಕಾರ್ಯಕ್ರಮ ಅತ್ಯಂತ ಹೆಚ್ಚುಕಟ್ಟಾಗಿ ಶಿಸ್ತು ಬದ್ಧವಾಗಿ ಪ್ರಾರಂಭಗೊಂಡಿದೆ ಈಗಾಗಲೇ ಬಿ ಎಲ್ಲೋ ರವರು ಪ್ರತಿಯೊಂದು ಮನೆಗೆ ಭೇಟಿ ನೀಡಿ ಸಂಬಂಧ ಪಟ್ಟ ಫಾರ್ಮುಗಳನ್ನ ದ್ವಿಪ್ರತಿಯಲ್ಲಿ ಮತದಾರರಿಗೆ ಕೊಡುವ ಒಂದು ಕಾರ್ಯದಲ್ಲಿ ತೊಡಗಿದ್ದು ದಯವಿಟ್ಟು ನಮ್ಮ ಮತದಾರ ಬಾಂಧವರು ಅವುಗಳನ್ನ ತೆಗೆದುಕೊಂಡು ಸಮಪ್ರಕವಾಗಿ ತುಂಬಾ ಬೇಕು ಆದ್ದರಿಂದ ಹೇಳಿರಿ ಎದ್ದೇಳಿರಿ ಮತದಾರ ಬಾಂಧವರೇ ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರುವರೆಗೂ ಸದಾ ಕ್ರಿಯಾಶೀಲರಾಗಿರಿ ಎಂದು ರಾಯಚೂರು ನಗರದ ಮಂತ್ರಾಲಯ ರಸ್ತೆಯಲ್ಲಿರುವ ವೆಂಕಟೇಶ್ವರ ಮಹಾವಿದ್ಯಾಲಯದಲ್ಲಿ ದಿನಾಂಕ 13.07.2026ರಂದು. ಜಿಲ್ಲಾಡಳಿತ. ಜಿಲ್ಲಾ ಪಂಚಾಯತ್. ಸ್ವೀಪ ಸಮಿತಿ ಹಾಗೂ ವೆಂಕಟೇಶ್ವರ ಮಹಾವಿದ್ಯಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಕುರಿತು ಉಪನ್ಯಾಸ ಕಾರ್ಯಕ್ರಮ ಜರಗಿತು .ಈ ವಿಷಯ ಕುರಿತು ಉಪನ್ಯಾಸ ನೀಡಲು ಬಂದಿದ್ದ ಸ್ವೀಪ್ ಸಮಿತಿಯ ಹಾಗೂ ಎಸ್‌ಐಆರ್ ಕಾರ್ಯಕ್ರಮಗಳ ಸಂಯೋಜನೆ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ತಮ್ಮ ಉಪನ್ಯಾಸವನ್ನು ನೀಡಿದರು. ಭಾರತ ಚುನಾವಣೆ ಆಯೋಗ ನಿರ್ದೇಶನದಂತೆ ಕರ್ನಾಟಕ ರಾಜ್ಯದ ರಾಯಚೂರ ಜಿಲ್ಲೆಯಲ್ಲಿ ಸಹ ವಿಶೇಷ ಸಮಗ್ರ ಪರಿಷ್ಕರಣೆಯ ಕಾರ್ಯಕ್ರಮ ನಡೆಯುತ್ತಿದ್ದು ಈಗಾಗಲೇ ಈ ಕಾರ್ಯಕ್ಕೆ 2ನೇಪುಟಕ್ಕೆ

## ಮೊಬೈಲ್ ದುರ್ಬಳಕೆಯಿಂದ ದೂರವಿರಿ ಶಿಕ್ಷಣದ ಜೊತೆ ಸಂಸ್ಕಾರವನ್ನೂ ಕಲಿಯಿರಿ: ಡಾ. ಹೈಂದವಿ ಗುಪ್ತಾಜೀ ಕರೆ

ಧೈರ್ಯದ ದಾರಿ




**ಮಾನ್ವಿ :** ಪಟ್ಟಣದ ಶಾರದಾ ವಿದ್ಯಾನಿಕೇತನ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದ ಶಾರದಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಹೈಂದವಿ ಮಧುಸೂದನ್ ಗುಪ್ತಾಜೀ ಮಾತನಾಡಿ ಇಂದಿನ ಆಧುನಿಕ ಯುಗದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಗಳಲ್ಲಿನ ತಂತ್ರಜ್ಞಾನವನ್ನು ದುರ್ಬಳಕೆ ಮಾಡಿಕೊಂಡು ತಮ್ಮ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಆದ್ದರಿಂದ ಉಪನ್ಯಾಸಕರು ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿಯನ್ನು ಕಲಿಸುವುದರ ಜೊತೆಗೆ ಮೊಬೈಲ್ ನಲ್ಲಿರುವ ತಂತ್ರಜ್ಞಾನವನ್ನು ಸರಿಯಾದ ರೀತಿಯಲ್ಲಿ ಹೇಗೆ ಬಳಸಿಕೊಳ್ಳಬೇಕು ಎಂಬುದನ್ನು ವಿದ್ಯಾರ್ಥಿಗಳಿಗೆ ತಿಳಿಸಬೇಕು. ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಮಾಡಬೇಕು" ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಲ್ಮಠದ ಅನುದಾನಿತ ಪ್ರೌಢ ಶಾಲೆಯ ದೈಹಿಕ ಶಿಕ್ಷಕರಾದ ಶಾಂತಮೂರ್ತಿ ಸ್ವಾಮಿ ಕೊಟ್ನೆಕಲ್ ಮಾತನಾಡಿ ಶಿಕ್ಷಣವೇ ಶಕ್ತಿ ಉತ್ತಮ ಶಿಕ್ಷಣವನ್ನು ಪಡೆಯದಿದ್ದರೆ ಜೀವನದಲ್ಲಿ ಪ್ರಗತಿ ಸಾಧಿಸಲು ಸಾಧ್ಯವಿಲ್ಲ. 1991 ರಿಂದ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮಾನ್ವಿಯಲ್ಲಿ ಶಾರದಾ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿದ ಡಾ. ಮಧುಸೂದನ್ ಗುಪ್ತಾಜೀ ಅವರ ಕನಸಿನ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಒಳ್ಳೆಯ ಫಲಿತಾಂಶದ 2ನೇಪುಟಕ್ಕೆ►

ಮೊದಲನೇ ಪುಟದಿಂದ

# ಕೆಪಿಎಸ್‌ಸಿ ಅಧ್ಯಕ್ಷರ ಅಮಾನತು: ಪ್ರಭುದೇವ್ ಹಂಗಾಮಿ ಅಧ್ಯಕ್ಷ

ರಾಷ್ಟ್ರಪತಿಗಳ ಮುಂದಿನ ಆದೇಶದವರೆಗೂ ಅಮಾನತು ಜಾರಿಯಲ್ಲಿರುವುದರಿಂದ ಈ ಅವಧಿಯಲ್ಲಿ ಕೆಪಿಎಸ್‌ಸಿ ಹಿರಿಯ ಸದಸ್ಯರು ಹಂಗಾಮಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ.
ಆಯೋಗದ ವಿಶ್ವಾಸಾರ್ಹತೆ ಹಾಗೂ ನೇಮಕಾತಿ ಪ್ರಕ್ರಿಯೆ ಪಾರದರ್ಶಕತೆಯ ಕಾಪಾಡುವ ನಿಟ್ಟಿನಲ್ಲಿ ರಾಜ್ಯಪಾಲು ಆದೇಶದಲ್ಲಿ ತಿಳಿಸಿದ್ದಾರೆ.
ಹಂಗಾಮಿ ಅಧ್ಯಕ್ಷರಾಗಿ ಹಿರಿಯ ಸದಸ್ಯ ಪ್ರಭುದೇವ ಅವರನ್ನು ನೇಮಕ ಮಾಡಲಾಗಿದೆ.

ಏನಿದು ವಿವಾದ: ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಲ್ಲಿನ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗೆ ಶಿವಶಂಕರಪ್ಪ ಅವರ ಪುತ್ರಿ ಸುಮಾ ಎಸ್. ಸಾಹುಕಾರ್ ಅವರು ಜಾತಿ/ಆದಾಯ ಪ್ರಮಾಣದ ಪತ್ರದಲ್ಲಿ ಕುಟುಂಬದ ವಾರ್ಷಿಕ ಆದಾಯ 40 ಸಾವಿರ ರೂ. ಎಂದು ತೋರಿಸಿ 3ಬಿ ಮೀಸಲಾತಿಗೆ ಅರ್ಜಿ ಸಲ್ಲಿಸಿದ್ದ ಮೂಲ ದಾಖಲೆಗಳ ಪರಿಶೀಲನೆ ವೇಳೆಯಲ್ಲಿ ಈ ವಿಷಯ ಆಯೋಗದ ಅಧಿಕಾರಿಗಳ ಗಮನಕ್ಕೆ ಬಂದಿತ್ತು. ಜೂನ್ 19 ರಂದು ನಡೆದ ಆಯೋಗದ ಸಭೆಗೆ ಈ ವಿಷಯದ ಟಿಪ್ಪಣಿಯನ್ನು ಕಾರ್ಯದರ್ಶಿ ಕೆ. ಜ್ಯೋತಿ ಮಂಡಿಸಿದ್ದರು. ಅಂದಿನ ಸಭೆಗೆ ಟಿಪ್ಪಣಿ ನೀಡಿದ ಶಿವಶಂಕರಪ್ಪ ಎಸ್. ಸಾಹುಕಾರ್ ಅವರು ಮಗಳ ವಿಷಯ ಕಾರ್ಯಸೂಚಿಯಲ್ಲಿರುವುದರಿಂದ ಸಭೆಯಿಂದ ಹೊರಗುಳಿಯುವುದಾಗಿ ತಿಳಿಸಿದ್ದರು. ಹೀಗಾಗಿ ಹಿರಿಯ ಸದಸ್ಯ ಪ್ರಭುದೇವ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿತ್ತು.

ಕಾರ್ಯದರ್ಶಿ ಅವರ ಟಿಪ್ಪಣಿಗಳ ಅಂಶ ಕುರಿತು ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದು ಆಯೋಗದ ಘನತೆಯನ್ನು ಕಾಪಾಡುವ ಉದ್ದೇಶದಿಂದ ಮತ್ತು ಮುಂದೆ ನಿಸ್ಪಕ್ಷಪಾತ ತನಿಖೆ ಆಗಬೇಕಾಗಿರುವುದರಿಂದ ಅಧ್ಯಕ್ಷರು ತಕ್ಷಣ ಅಧ್ಯಕ್ಷ ಹುದ್ದೆಗೆ ರಾಜೀನಾಮೆ ನೀಡಬೇಕು. ಯಾವುದೇ ಅಡೆತಡೆ ಇಲ್ಲದೆ ಸುಗಮವಾಗಿ ನೇಮಕಾತಿ ಪ್ರಕ್ರಿಯೆಗಳನ್ನು ಹಿರಿಯ ಸದಸ್ಯರ ನೇತೃತ್ವದಲ್ಲಿ ನಡೆಸಬೇಕು. ಈ ವಿಷಯವು ಗಂಭೀರವಾಗಿರುವುದರಿಂದ ಸರ್ಕಾರದ ಗಮನಕ್ಕೆ ತರುವುದು ಸೂಕ್ತವಾಗಿದೆ. ಹೀಗಾಗಿ ಆಯೋಗದ ಕಾರ್ಯದರ್ಶಿಯವರು ಒಂದು ವಿವರವಾದ ವರದಿಯನ್ನು ಸರ್ಕಾರಕ್ಕೆ ತಕ್ಷಣವೇ ನೀಡಬೇಕು ಎಂಬ ನಿರ್ಣಯವನ್ನು ಕೈಗೊಳ್ಳಲಾಗಿತ್ತು. ಅಲ್ಲದೆ ಅಭ್ಯರ್ಥಿ ಸುಮಾ ಸಲ್ಲಿಸಿರುವ 3ಬಿ ಮೀಸಲಾತಿ ತಿರಸ್ಕರಿಸಿ ಅಭ್ಯರ್ಥಿ ಮತ್ತು ಸುಳ್ಳು ಆದಾಯ ಪ್ರಮಾಣ ಪತ್ರ ಪಡೆಯಲು ಸಹಕರಿಸಿದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು, ಅಭ್ಯರ್ಥಿಯನ್ನು ಅನರ್ಹಗೊಳಿಸಬೇಕು ಆಯೋಗದಿಂದ ನಡೆಸುವ ಯಾವುದೇ ನೇಮಕಾತಿಯಲ್ಲಿ ಭಾಗವಹಿಸದಂತೆ ಶಾಶ್ವತವಾಗಿ ನಿರ್ಬಂಧಿಸಬೇಕು ಎಂಬ ನಿರ್ಣಯವನ್ನು ಕೈಗೊಳ್ಳಲಾಗಿತ್ತು.

ಸಭೆಯ ಬಳಿಕ ಆಯೋಗದ ಸದಸ್ಯರು ಲೋಕಭವನಕ್ಕೆ ತೆರಳಿ ರಾಜ್ಯಪಾಲರಿಗೆ ದೂರು ನೀಡಿದ್ದರು. ಆ ಬೆನ್ನಲ್ಲೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಕಾರ್ಯದರ್ಶಿಗಳನ್ನು ಕರೆಸಿಕೊಂಡು ಮಾಹಿತಿ ಪಡೆದುಕೊಂಡಿದ್ದು ಸಾಹುಕಾರ್ ಸಹ ರಾಜ್ಯಪಾಲರನ್ನು ಭೇಟಿ ಮಾಡಿ ವಿವರಣೆ ನೀಡಿದ್ದರು.

ಇದೆಲ್ಲದರ ಮಧ್ಯೆ ತಾನು ರಾಜೀನಾಮೆ ನೀಡಬೇಕು ಎಂಬ ಆಯೋಗದ ಸದಸ್ಯರ ಸಭೆಯಲ್ಲಿ ಕೈಗೊಂಡ ನಿರ್ಣಯ ಪ್ರಶ್ನಿಸಿ ಶಿವಶಂಕರಪ್ಪ ಸಾಹಾಕಾರ್ ಹೈಕೋರ್ಟ್ ಮೆಟ್ಟಿಲೇರಿದ್ದರು. ಹೈಕೋರ್ಟ್‌ನ ನ್ಯಾ. ಸೂರುಜ್ ಗೋವಿಂದರಾಜ್ ಅವರು ರಿಟ್ ಅರ್ಜಿಯ ವಿಚಾರಣೆ ನಡೆಸಿ ಕೆಪಿಎಸ್‌ಸಿ ಸಭೆಯ ನಿರ್ಣಯಕ್ಕೆ ತಡೆ ನೀಡಿದ್ದರು.
ಅಲ್ಲದೆ ಅಂದಿನ ಆಯೋಗದ ಸಭೆಯಲ್ಲಿ ಭಾಗಿಯಾಗಿದ್ದ ಸದಸ್ಯರಾದ ಬಿ. ಪ್ರಭುದೇವ್, ಶಾಂತ ಹೊಸಮನಿ, ಹೆಚ್.ಎಸ್. ನರೇಂದ್ರ, ಡಿ.ಬಿ. ಗೀತಾ, ಶಂಕುತಲಾ ಎಸ್,. ದುಂಡಿಗರ್, ಆರ್. ಕಾವಲಮ್ಮ, ಎಂ.ವಿ. ರಾಮಕೃಷ್ಣ ಪ್ರಸಾದ್, ಶಿವನಗೌಡ, ವಿ. ದೇವಪ್ಪ, ಹೆಚ್.ಎಸ್. ಭೋಜಾನಾಯಕ್ ಹಾಗೂ ಆಯೋಗದ ಕಾರ್ಯದರ್ಶಿಗಳಿಗೆ ನೋಟಿಸ್ ಜಾರಿ ಮಾಡಿ ನ್ಯಾಯಾಲಯ ವಿಚಾರಣೆಯನ್ನು ಆಗಸ್ಟ್ 11 ಕ್ಕೆ ಮುಂದೂಡಿತ್ತು.
ಕೆಪಿಎಸ್‌ಸಿ ಸಭೆಯ ನಿರ್ಣಯಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡುತ್ತಿದ್ದಂತೆಯೇ ಕೈಗಾರಿಕಾ ವಿಸ್ತರಣಾಧಿಕಾರಿಗಳ ಹುದ್ದೆಯ ಅಭ್ಯರ್ಥಿ ಸುಮಾ ಎಸ್. ಸಾಹುಕಾರ್ ಅವರು ಸುಳ್ಳು ಆದಾಯ ಮತ್ತು ಜಾತಿ ಪ್ರಮಾಣ ಪತ್ರ ಸಲ್ಲಿಸಿದ್ದಾರೆ ಎಂದು ಕೆಪಿಎಸ್‌ಸಿ ಕಾರ್ಯದರ್ಶಿ ಕೆ. ಜ್ಯೋತಿ ಅವರು ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರು ಆಧರಿಸಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು.
ಈಗ ರಾಜ್ಯಪಾಲರು ಕೆಪಿಸಿಎಸ್‌ಸಿ ಅಧ್ಯಕ್ಷರನ್ನು ಅಮಾನತು ಮಾಡಿ ಸುಪ್ರೀಂಕೋರ್ಟ್ ತನಿಖೆಗೆ ರಾಷ್ಟ್ರಪತಿಗಳಿಗೆ ಶಿಫಾರಸ್ಸು ಮಾಡಿದ್ದಾರೆ.

# ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿ: ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್

ಹಳ್ಳಿಗಳಲ್ಲಿ ಜನರಿಗೆ ಶುದ್ಧ ನೀರು ಸಿಗದ ಕಾರಣ ಆರೋಗ್ಯದ ಸಮಸ್ಯೆ ಎದುರಾದ ಕುರಿತು ಲೋಕಾಯುಕ್ತರಿಂದ ಸ್ವಯಂ ಪ್ರಕರಣಗಳು ದಾಖಲಿಸಲಾಗಿದೆ ಎಂದರು.
ಜಿಲ್ಲೆಯಲ್ಲಿ 319 ಕೆರೆಗಳಿದ್ದು, ಎಲ್ಲಾ ಕೆರೆಗಳ ಮೇಲೆ ಸಾರ್ವಜನಿಕ ಹಿತಶಕ್ತಿ ಪ್ರಕರಣದಡಿ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ. ಎರಡು ಕೆರೆಗಳನ್ನು ಹೊರತುಪಡಿಸಿ ಎಲ್ಲ ಕೆರೆಗಳು ಸರ್ವೆ ಮಾಡಲಾಗಿದೆ. ಕೆರೆಯ ಅಭಿವೃದ್ಧಿ ಕುರಿತು ಯೋಜನೆಗಳನ್ನು ರೂಪಿಸಬೇಕು. ಕೆರೆಗಳನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರ ಉಪಯೋಗಕ್ಕೆ ನೀಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಲೋಕಾಯುಕ್ತರು ಸೂಚಿಸಿದರು.
ನಗರದ ಸ್ವಚ್ಛತೆ ಕುರಿತು ಪ್ರತಿಯೊಬ್ಬ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಬೇಕು. ಮನೆಯ ಸ್ವಚ್ಛತೆಯಂತೆಯೇ, ನಗರ ಸ್ವಚ್ಛತೆಗೂ ಆದ್ಯತೆಯ ಮೇಲೆ ಪ್ರಾಮುಖ್ಯತೆ ನೀಡಲು ಅಧಿಕಾರಿಗಳು ಸೇರಿದಂತೆ ಪ್ರತಿಯೊಬ್ಬ ನಾಗರಿಕರು ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಲೋಕಾಯುಕ್ತ ಪೊಲೀಸ್ ರಾಯಚೂರು ಜಿಲ್ಲಾ ಅಧೀಕ್ಷಕರಾದ ಸಿದ್ದರಾಜು, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ, ರಾಯಚೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ಕೃಷ್ಣ, ಡಿಡಿಎಲ್.ಆರ್. ರೇಷ್ಮಾ ಪಾಟೀಲ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ತಿಮ್ಮಪ್ಪ ಬಿರಾದಾರ್, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಜಿಲ್ಲಾ ವ್ಯವಸ್ಥಾಪಕ ಸಾಜೀದ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಲೋಕೋಪಯೋಗಿ ಇಲಾಖೆಯ ಇಇ ವೆಂಕಟೇಶ ಗಲಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ಮೊಬೈಲ್ ದುರ್ಬಳಕೆಯಿಂದ ದೂರವಿರಿ ಶಿಕ್ಷಣದ ಜೊತೆ ಸಂಸ್ಕಾರವನ್ನೂ ಕಲಿಯಿರಿ: ಡಾ. ಹೈಂದವಿ ಗುಪ್ತಾಜೀ ಕರೆ

ಜೊತೆಗೆ ಉತ್ತಮ ಸಂಸ್ಕಾರವನ್ನು ಪಡೆದು ತಂದೆ-ತಾಯಿಯ ಕನಸನ್ನು ನನಸು ಮಾಡಬೇಕು ಎಂದು ಸಲಹೆ ನೀಡಿದರು.
ಬಿ.ಎಡ್ ಕಾಲೇಜಿನ ಹಿರಿಯ ಉಪನ್ಯಾಸಕರಾದ ಈರಣ್ಣ ಮರ್ಲಟ್ಟಿ ಮಾತನಾಡಿ ವಿದ್ಯಾರ್ಥಿಗಳು ಶಿಸ್ತುಬದ್ಧವಾಗಿ ವಿದ್ಯೆಯನ್ನು ಕಲಿತಾಗ ಮಾತ್ರ ವಿದ್ಯೆಯು ಮಸ್ತಕಕ್ಕೆ ಮುಟ್ಟುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾರದಾ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಬಿ. ಕಿಶೋರ್ ಕುಮಾರ್ ಸಂಸ್ಥೆಯ ಅಧ್ಯಕ್ಷರಾದ ಉಮಾಮಹೇಶ್ವರಿ ಮಧುಸೂದನ್ ಗುಪ್ತಾಜೀ ಬಿ.ಎಡ್ ಕಾಲೇಜಿನ ಪ್ರಾಚಾರ್ಯರಾದ ಡಾ. ಪರಮೇಶ್ವರಪ್ಪ ಗೋಪಶೆಟ್ಟಿ ಮತ್ತು ಡಿ.ಎಡ್ ಕಾಲೇಜಿನ ಪ್ರಾಚಾರ್ಯರಾದ ಹನುಮಂತಗೌಡ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಚಾರ್ಯರಾದ ವೀರಭದ್ರಯ್ಯ ಹಿರೇಮಠ ಮಾತನಾಡಿ ನಮ್ಮ ಕಾಲೇಜಿನಲ್ಲಿ ಪಿಯುಸಿ ವಿದ್ಯಾರ್ಥಿಗಳಿಗೆ ಜ್ಞಾನದ ಜೊತೆಗೆ ಅನುಭವದ ಬುದ್ಧಿಶಕ್ತಿಯನ್ನು ನೀಡಲಾಗುತ್ತಿದೆ. ವಿವಿಧ ಹಳ್ಳಿಗಳಿಂದ ಬಂದ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ಉತ್ತಮ ಫಲಿತಾಂಶ ಪಡೆಯಲು ಮಾರ್ಗದರ್ಶನ ನೀಡಲಾಗುತ್ತಿದೆ. ಮಧುಸೂದನ್ ಗುಪ್ತಾಜೀ ಅವರ ಉತ್ತಮ ಶಿಕ್ಷಣದ ಕನಸನ್ನು ನಮ್ಮ ಪಿಯುಸಿ ವಿದ್ಯಾರ್ಥಿಗಳ ಮೂಲಕ ನನಸು ಮಾಡುತ್ತೇವೆ" ಎಂದು ಹೇಳಿದರು.

ಕಾರ್ಯಕ್ರಮವನ್ನು ಪ್ರಿಯಾಂಕ ಮಾಡಗಿರಿ ನಿರೂಪಿಸಿದರು. ಮಹಾಲಕ್ಷ್ಮಿ ಸ್ವಾಗತಿಸಿದರು. ಯಲ್ಲಮ್ಮ ವಂದಿಸಿದರು.

## ಏಳಿರಿ .ಎದ್ದೇಳಿರಿ. ಮತದಾರರೇ ಮತ ಪಟ್ಟಿಯಲ್ಲಿ ನಿಮ್ಮ ಹೆಸರು ಸೇರುವರಿಗೆ ನಿರಂತರ ಕ್ರಿಯಾಶೀಲರಾಗಿರಿ. ಡಾ. ಬಿರಾದಾರ

ಸುಪ್ರೀಂ ಕೋರ್ಟ್ ಸಂಪೂರ್ಣ ಬೆಂಬಲವನ್ನು ಸೂಚಿಸಿದೆ. ಪ್ರತಿಯೊಬ್ಬ ಹದಿನೆಂಟು ವರ್ಷ ಪೂರ್ಣ ಗೊಳಿಸಿದಂತ ಮತದಾರರು ಅಂದರೆ ಯುವಕ ಯುವತಿಯರು ಹೊಸದಾಗಿ ಸಹ ಮತದಾರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರಿಸಬೇಕು. ಜೊತೆಗೆ ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರನ್ನ ಹೊಂದಿದವರು ತಮ್ಮ ಮನೆಗೆ ಮತಗಟ್ಟೆ ಅಧಿಕಾರಿಗಳು ತಮ್ಮ ಮನೆಯಲ್ಲಿರುವ ಅರ್ಹ ಮತದಾರರ ಸಂಖ್ಯೆಗೆ ಹಣವಾಗಿ ಅನುಗುಣವಾಗಿ ಒಬ್ಬೊಬ್ಬರಿಗೆ 2 ಫಾರ್ಮು ಕೊಡುತ್ತಾರೆ ಅವುಗಳನ್ನು ತಾವುಗಳು ಸರಿಯಾಗಿ ತುಂಬಬೇಕು .ನಂತರ ಒಂದು ಫಾರ್ಮನ್ನ ಬಿ ಎಸ್ ರವರಿಗೆ ಕೊಟ್ಟು ಸ್ವೀಕೃತಿ ಪತ್ರವನ್ನು ತೆಗೆದುಕೊಳ್ಳಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಿರಿ .ನಮ್ಮ ಎಸ್.ಐ.ಆರ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿರಿ. ಈ ಕಾರ್ಯಕ್ರಮದ ಯಶಸ್ವಿ ಪ್ರಜಾಪ್ರಭುತ್ವದ ಆಡಳಿತದ ಯಶಸ್ವಿ. ಎಸ್‌ಐಆರ್ ಕಾರ್ಯ ಜನರ ಒಂದು ಕಾರ್ಯವಾಗಿದೆ .ಗಂಡು ಹೆಣ್ಣು ಎನ್ನದೆ ಎಸ್‌ಐಆರನಂತೆ ಪ್ರತಿಯೊಬ್ಬರು ಮತದಾರರಾಗಿರಿ .ಎಲ್ಲ ಮತದಾರ ಬಾಂಧವರೇ ತಾವು ಮತದಾರ ಪಟ್ಟಿಯಲ್ಲಿ ಹೆಸರು ಸೇರಿದಾಗ ಮಾತ್ರ ಮತದಾನ ದಿನ ಮತಗಟ್ಟೆಗೆ ಹೋಗಿ ಮತ ಚಲಾಯಿಸಲು ಅನುಕೂಲವಾಗುತ್ತದೆ. ಜೂನ್ 30 ರಿಂದ ರಿಂದ ಜುಲೈ 29 ರವರೆಗೆ ಈ ಪ್ರಕ್ರಿಯೆ ನಡೆಯಲಿದೆ .ಆದ್ದರಿಂದ ಮತದಾರರೇ ಹೇಳಿರಿ ಎದ್ದೇಳಿರಿ ಮತದಾರ ಪಟ್ಟಿಯಲ್ಲಿ ಹೆಸರು ಸೇರುವರೆಗೂ ಸದಾ ಕ್ರಿಯಾಶೀಲರಾಗಿರಿ. ಮತದಾನ ಮಾಡುವುದು ನಿಮ್ಮ ಹಕ್ಕು ಅದೇ ರೀತಿಯಾಗಿ ಆರ್ಯ ಮತದಾರರ ಮತದಾರ ಪಟ್ಟಿಯಲ್ಲಿ ಹೆಸರು ಸೇರಿಸುವುದು ಕರ್ತವ್ಯ ಎಂಬುದನ್ನ ಪ್ರತಿಯೊಬ್ಬರು ಅರಿತುಕೊಳ್ಳಬೇಕು. ಎಸ್‌ಐಆರ್ ಎಂಬುದು ಕೇವಲ ಆಡಳಿತಾತ್ಮಕ ಉದ್ದೇಶದಿಂದ ಕೈಗೊಳ್ಳುವ ಪ್ರಕ್ರಿಯೆ ಅಷ್ಟೇ ಎಂದು ನಿರ್ಣಯಿಸಲು ಸಾಧ್ಯವಿಲ್ಲ .ಆಯೋಗ ತನ್ನ ಶಾಸನಬದ್ಧ ಅಧಿಕಾರ ಮೀರಿ ಕಾರ್ಯನಿರ್ವಹಿಸಿದೆ ಎಂಬುವುವನ್ನು ಒಪ್ಪಲಾಗದು .ನ್ಯಾಯ ಸಮ್ಮತ ಮತ್ತು ಮುಕ್ತ ಚುನಾವಣೆ ಯಾಂತ್ರಿಕವಾಗಿ ನಡೆಯುವ ಮತದಾನ ಪ್ರಕ್ರಿಯೆನಷ್ಟೇ ಅವಲಂಬಿಸಿಲ್ಲ .ಮೂಲಭೂತವಾಗಿ ಮತದಾರರ ಪಟ್ಟಿಗಳ ಸಮಗ್ರತೆ ನಿಕರದ ಮತ್ತು ವಿಶ್ವಾಸಾರ್ಹತೆಯನ್ನು ಅವಲಂಬಿಸಿದೆ ಎಂದು ಈಗಾಗಲೇ ಸುಪ್ರೀಂಕೋರ್ಟ್ ಈಕುರಿತು ಪ್ರಮುಖವಾಗಿ ಹೇಳಿದೆ .ಆದ್ದರಿಂದ ನಾವುಗಳು ನಮ್ಮ ಜಿಲ್ಲೆಯಲ್ಲಿ ಪ್ರಾರಂಭವಾಗಿರುವ ಎಸ್‌ಐಆರ್ ಕಾರ್ಯಕ್ರಮಕ್ಕೆ ಸಹಕಾರ ನೀಡೋಣ ಬಿ ಎಲ ಒ.ರಿಗೆ ಸಮಗ್ರವಾದ ಮಾಹಿತಿ ಕೊಡೋಣ ಇಡೀ ರಾಜ್ಯದಲ್ಲಿ ಮಾದರಿಯ ಎಸ್‌ಐಆರ್ ಕ್ಷೇತ್ರದಲ್ಲಿ ಜಿಲ್ಲೆಯನ್ನಾಗಿ ಮಾಡೋಣ ಎಂದು ಡಾ. ಬಿರಾದಾರ ತಮ್ಮ ಉಪನ್ಯಾಸದಲ್ಲಿ ಹೇಳಿದರು .ಕಾಲೇಜಿನ ಉಪನ್ಯಾಸಕರಾದ ಚಿದಾನಂದರವರು ಅಧ್ಯಕ್ಷ ಭಾಷಣದಲ್ಲಿ ಎಸ್‌ಐಆರ್ ಮಹತ್ವ ಅದರ ಹಿನ್ನೆಲೆ ಕುರಿತು ಮಾತನಾಡಿದರು .ಈ ಸಂದರ್ಭದಲ್ಲಿ ಅಮರೇಶ್ ಹಿರೇಮಠ್ ಕಾರ್ಯಕ್ರಮವನ್ನ ನಿರೂಪಿಸಿದರು ಹನುಮಂತ ನಾಯಕ್ ಉಪನ್ಯಾಸಕರು ಕೊನೆಯಲ್ಲಿ ವಂದಿಸಿದರು ಈ ಸಂದರ್ಭದಲ್ಲಿ ಶಾಲಾ ಸಿಬ್ಬಂದಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು

# ತಾತ್ಕಾಲಿಕ ಆಯ್ಕೆ ಪ್ರಕಟ: ಅಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 13:** ರಾಯಚೂರು ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಗೆ ಬರುವ ಸುಖಶಾಂತಿನಗರ ಅಂಗನವಾಡಿ ಕೇಂದ್ರದ ಅಂಗನವಾಡಿ ಸಹಾಯಕಿಯ ತಾತ್ಕಾಲಿಕವಾಗಿ ಆಯ್ಕೆ ಪ್ರಕಟಿಸಲಾಗಿದ್ದು, ಅಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ.
ಸುಖಶಾಂತಿನಗರ ಅಂಗನವಾಡಿ ಕೇಂದ್ರದ ಅಂಗನವಾಡಿ ಸಹಾಯಕಿಯ ಹುದ್ದೆಯು ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ಅಂಗನವಾಡಿ ಸಹಾಯಕಿಯಾಗಿ ಶ್ರೀಮತಿ ಸರಿತ ಗಂಡ ಮಲ್ಲಯ್ಯ ಅವರು ತಾತ್ಕಾಲಿಕ ಆಯ್ಕೆಗೆ ಆಯ್ಕಾಗಿದ್ದಾರೆ. ಆಯ್ಕೆಗೆ ಆಕ್ಷೇಪಣೆ ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಜುಲೈ 20ರ ಸಂಜೆ 05.30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಸಜ್ಜಿತ ಕಟ್ಟಡಗಳ ಬಾಡಿಗೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 13:** ಮಕ್ಕಳ ರಕ್ಷಣಾ ನಿರ್ದೇಶನಾಲಯದ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಬಾಲಕರ ಬಾಲಮಂದಿರ ರಾಯಚೂರು ಮತ್ತು ಸರ್ಕಾರಿ ಬಾಲಕಿಯರ ಬಾಲಮಂದಿರ ರಾಯಚೂರು ಸಂಸ್ಥೆಗಳು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015ರಡಿ ನೊಂದಾಣಿಯಾಗಿ ಜಿಲ್ಲೆಯಲ್ಲಿ 6-18 ವರ್ಷದೊಳಗಿನ ಮಕ್ಕಳ ರಕ್ಷಣೆ ಮತ್ತು ಪೋಷಣೆಗಾಗಿ ಕಾರ್ಯನಿರ್ವಸುತ್ತಿವೆ.
ಸರ್ಕಾರಿ ಬಾಲಕರ ಬಾಲಮಂದಿರ ರಾಯಚೂರು ಸಂಸ್ಥೆಗೆ 50 ಮಕ್ಕಳು ವಾಸಿಸಲು ಹಾಗೂ ಕಛೇರಿಯ ಉಪಯೋಗಕ್ಕೆ ಮತ್ತು ಸರ್ಕಾರಿ ಬಾಲಕಿಯರ ಬಾಲಮಂದಿರ ರಾಯಚೂರು ಸಂಸ್ಥೆಗೆ 100 ಮಕ್ಕಳು ವಾಸಿಸಲು ಹಾಗೂ ಕಚೇರಿಯ ಉಪಯೋಗಕ್ಕೆ ಅನುಕೂಲವಾಗುವಂತೆ ರಾಯಚೂರು ನಗರದಲ್ಲಿ ಸುಸಜ್ಜಿತ ಕಟ್ಟಡಗಳು ಬಾಡಿಗೆಗೆ ಇದ್ದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಾರ್ಯಲಯ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಮ.ನಂ. 1-9-138 ಮಾರೆಮ್ಮ ದೇವಸ್ಥಾನದ ಹತ್ತಿರ, ಆಜಾದ ನಗರ ರಾಯಚೂರು ದೂರವಾಣಿ ಸಂಖ್ಯೆ: 08532-226226 ಅಥವಾ ಮೊಬೈಲ್ ಸಂಖ್ಯೆ: 8618362385, 9880957574, 9019862362ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಮನಾಬಾದಗೆ ಸಚಿವ ಯತೀಂದ್ರ ಸಿದ್ದರಾಮಯ್ಯ ಭೇಟಿ



**ಹುಮನಾಬಾದ :** ನಗರದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಗೆ ಸೋಮವಾರ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಭೇಟಿ ನೀಡಿದರು.
ಈ ವೇಳೆ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ಸನ್ಮಾನಿಸಿ, ಗೌರವಿಸಿದರು.

ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ವಾಡಿಕೆಗಿಂತ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿದ್ದ ಪರಿಣಾಮ ಮುಂಗಾರು ಬಿತ್ತನೆಗೆ ಹಿನ್ನಡೆಯಾಗಿದೆ. ಪ್ರಸ್ತುತ ಸಾಲಿನಲ್ಲಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಹೀಗಾಗಿ ಬೀದರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಬೇಕೆಂದು ಒತ್ತಾಯಿಸಬೇಕು ಎಂದು ಆಗ್ರಹಿಸಿದರು.

ಬೀದರ ಜಿಲ್ಲೆಯಲ್ಲಿ ಸಹಕಾರ ಸಕ್ಕರೆ ಕಾರ್ಖಾನೆ ಮುಚ್ಚಿರುವ ಕಾರಣದಿಂದಾಗಿ ಕಬ್ಬು ಬೆಳೆಗಾರರು ಹಾಗೂ ಕಾರ್ಖಾನೆ ಕಾರ್ಮಿಕರು ಅನೇಕ ಸಮಸ್ಯೆಗಳು ಎದುರಿಸುತ್ತಿದ್ದಾರೆ. ಈ ಭಾಗದ ಕಬ್ಬು ಬೆಳೆಗಾರರ ಹಾಗೂ ಕಾರ್ಖಾನೆ ಕಾರ್ಮಿಕರ ಹಿತದೃಷ್ಟಿಯಿಂದ ಶೀಘ್ರದಲ್ಲೇ ಕಾರ್ಖಾನೆ ಪುನಶ್ಚೇತನ ಮಾಡಬೇಕು. ಇದರ ಹೊರತಾಗಿ ಕಾರ್ಖಾನೆ ಲೀಜ್ ಕೊಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಬೇಕೆಂದು ಸಚಿವರ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಯುವ ಕಾಂಗ್ರೆಸ್ ಅಧ್ಯಕ್ಷ ಉಮೇಶ ಜಮಗಿ, ಕಾಂಗ್ರೆಸ್ ಒಬಿಸಿ ಅಧ್ಯಕ್ಷೆ ಸುಮಿತ್ರಾ ಪರೀಟ್, ಜಿಪಂ. ಮಾಜಿ ಅಧ್ಯಕ್ಷೆ ಭಾರತಬಾಯಿ ಶೇರಿಕಾರ, ತಾಪಂ. ಅಧ್ಯಕ್ಷೆ ಕಲಾವತಿ ರಜಪೂತ್, ಟಿಎಂಸಿ ಮಾಜಿ ಉಪಾಧ್ಯಕ್ಷ ಮುಕ್ರಮ್ ಜಾ, ಪ್ರಮುಖರಾದ ಕಂಟೆಪ್ಪ ದಾನ, ಕೇಶಪ್ಪ ಬಿರಾದಾರ, ಸತೀಷ ರಾಂಪೂರೆ, ಅಶೋಕ ಚಳಕಾಪೂರೆ, ಮಾಣಿಕ ಬೆಳಕೇರಾ, ಶಿವಾನಂದ ಕಟ್ಟಿಮನಿ, ರಾಹುಲ್ ಉದ್ದಾ, ಗುಂಡಪ್ಪ ಹೊನ್ನಕೇರಿ, ಸೈಯದ್ ಬಾಸೀದ್, ಸೈಯದ್ ಯಾಸೀನ್, ವೀರಪ್ಪ ಭೂತಾಳೆ, ಲಖನ ಕೋಳಿವಾಡ, ಸುರೇಶ ಘಾಂಗ್ರೆಸ್ ತಾನಾಜಿ ಪಾಟೀಲ್, ವಿಠಲ್ ಡಾವರಗಾಂವ, ಜೈರಾಜ ವೈದ್ಯ, ಸೈಯದ್ ಜಾಫರ, ವಿಜಯಕುಮಾರ ಬಾಸಪಳ್ಳಿ, ವಿಜಯ ಪವಾರ, ಶಿವಕುಮಾರ ಪರೀಟ್, ಎಂಡಿ. ಮಾಜಿದ್ ಬಬ್ಲೂ, ವಾಜೀದ್ ಪಟೇಲ್ ಸೇರಿದಂತೆ ಅನೇಕರಿದ್ದರು.

# ಹೊರ್ಮುಜ್ ನಿಯಂತ್ರಣಕ್ಕೆ ಅಮೆರಿಕ–ಇರಾನ್ ಭೀಕರ ಸಂಘರ್ಷ



**ವಾಷಿಂಗ್ಟನ್/ಟೆಹ್ರಾನ್, ಜು.13:** ಕಾರ್ಯತಂತ್ರದ ದೃಷ್ಟಿಯಿಂದ ಅತ್ಯಂತ ನಿರ್ಣಾಯಕವಾಗಿರುವ ಹೊರ್ಮುಜ್ ಜಲಸಂಧಿಯ ನಿಯಂತ್ರಣಕ್ಕಾಗಿ ಅಮೆರಿಕ ಮತ್ತು ಇರಾನ್ ನಡುವಿನ ಮಿಲಿಟರಿ ಸಂಘರ್ಷ ತಾರಕಕ್ಕೇರಿದೆ. Arabs& Middle Easterners
ಇರಾನ್ ಈ ಜಲಮಾರ್ಗವನ್ನು ಮುಚ್ಚಿರುವುದಾಗಿ ಘೋಷಿಸಿದ ಬೆನ್ನಲ್ಲೇ, ಅಮೆರಿಕವು ಇರಾನ್‌ನ 140ಕ್ಕೂ ಹೆಚ್ಚು ಮಿಲಿಟರಿ ನೆಲೆಗಳ ಮೇಲೆ ಭೀಕರ ವೈಮಾನಿಕ ದಾಳಿ ನಡೆಸಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಮಿಲಿಟರಿ ಪಡೆಗಳು ಗಲ್ಫ್ ಪ್ರದೇಶದಲ್ಲಿರುವ ಅಮೆರಿಕದ ಮಿಲಿಟರಿ ನೆಲೆಗಳು ಹಾಗೂ ಅದರ ಮಿತ್ರ ರಾಷ್ಟ್ರಗಳ ಮೇಲೆ ಭಾರಿ ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸಿರುವುದರಿಂದ ಮಧ್ಯಪ್ರಾಚ್ಯದಲ್ಲಿ ಯುದ್ಧದ ಭೀತಿ ಮತ್ತಷ್ಟು ತೀವ್ರಗೊಂಡಿದೆ.

140 ನೆಲೆಗಳ ಮೇಲೆ ಅಮೆರಿಕ ದಾಳಿಅನುಮತಿ ಇಲ್ಲದ ಮಾರ್ಗದಲ್ಲಿ ಚಲಿಸುತ್ತಿದೆ ಎಂಬ ನೆಪವೊಡ್ಡಿ ಸೈಪ್ರಸ್ ಧ್ವಜ ಹೊತ್ತ ಎಂವಿ ಜಿಎಫ್ಎಸ್ ಗ್ಯಾಲಕ್ಸಿ ವಾಣಿಜ್ಯ ಹಡಗಿನ ಮೇಲೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ನೌಕಾಪಡೆಯು ಕ್ರೂಸ್ ಕ್ಷಿಪಣಿ ದಾಳಿ ನಡೆಸಿತ್ತು.ಈ ದಾಳಿಯಲ್ಲಿ ಹಡಗಿನ ಎಂಜಿನ್ ರೂಮ್ ಧ್ವಂಸಗೊಂಡಿದ್ದು, ಓರ್ವ ಸಿಬ್ಬಂದಿ ನಾಪತ್ತೆಯಾಗಿದ್ದಾರೆ. ಇರಾನ್‌ನ ಈ ಉದ್ಧಟತನಕ್ಕೆ ತಕ್ಕ ಪ್ರತ್ಯುತ್ತರ ನೀಡಿರುವ ಅಮೆರಿಕದ ಸೆಂಟ್ರಲ್ ಕಮಾಂಡ್ ಇರಾನ್‌ನ ಕರಾವಳಿ ಕಣ್ಗಾವಲು ಕೇಂದ್ರಗಳು, ಕ್ಷಿಪಣಿ ಮತ್ತು ಡ್ರೋನ್ ಉಡಾವಣಾ ನೆಲೆಗಳು ಹಾಗೂ ಸಂವಹನ ಜಾಲಗಳು ಸೇರಿದಂತೆ 140ಕ್ಕೂ ಹೆಚ್ಚು ಸೇನಾ ಗುರಿಗಳನ್ನು ಧ್ವಂಸಗೊಳಿಸಿದೆ. ಅಮೆರಿಕ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್,ಇರಾನ್ ತಪ್ಪು ನಿರ್ಧಾರ ಕೈಗೊಂಡಿದೆ.ಈಗ ಅದಕ್ಕೆ ತಕ್ಕ ಬೆಲೆ ತೆರುತ್ತಿದೆ ಎಂದು ಎಚ್ಚರಿಸಿದ್ದಾರೆ. ಗಲ್ಫ್ ರಾಷ್ಟ್ರಗಳ ಮೇಲೆ ಇರಾನ್ ಪ್ರತಿಯಾಕ್ರಮಣಅಮೆರಿಕದ ದಾಳಿಗೆ ತೀವ್ರ ಪ್ರತಿಕ್ರಿಯೆ ನೀಡಿರುವ ಇರಾನ್, ಜೋರ್ಡಾನ್‌ನಲ್ಲಿರುವ ಅಮೆರಿಕದ ಪ್ರಿನ್ಸ್ ಹಸನ್ ವಾಯುನೆಲೆಯ ಕಮಾಂಡ್ ಸೆಂಟರ್ ಮತ್ತು ಡ್ರೋನ್ ಹ್ಯಾಂಗರ್‌ಗಳನ್ನು ಧ್ವಂಸಗೊಳಿಸಿರುವುದಾಗಿ ಹೇಳಿಕೊಂಡಿದೆ.

ಇದರೊಂದಿಗೆ ಯುಎಇ ಕತಾರ್, ಕುವೈತ್, ಓಮನ್ ಮತ್ತು ಬಹ್ರೇನ್ ದೇಶಗಳ ಮೇಲೆಯೂ ಇರಾನ್ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳನ್ನು ನಡೆಸಿದೆ. ಕಳೆದ ಮೇ ತಿಂಗಳಿನಿಂದ ಯಾವುದೇ ದಾಳಿಗೆ ಒಳಗಾಗದ ಯುಎಇ ಮತ್ತು ಕತಾರ್ ದೇಶಗಳು ಇರಾನ್‌ನ ಕ್ಷಿಪಣಿಗಳನ್ನು ಹೊಡೆದುರುಳಿಸಿರುವುದಾಗಿ ಪ್ರಕಟಿಸಿವೆ.

ಜಲಸಂಧಿ ಮುಚ್ಚಿಲ್ಲ, ಮುಕ್ತವಾಗಿದೆ: ಅಮೆರಿಕ ಸ್ಪಷ್ಟನೆಇರಾನ್ ಈ ಜಲಮಾರ್ಗವನ್ನು ಸಂಪೂರ್ಣವಾಗಿ ಮುಚ್ಚಿರುವುದಾಗಿ ಘೋಷಿಸಿದ್ದರೂ, ಅಮೆರಿಕದ ಸೆಂಟ್ರಲ್ ಕಮಾಂಡ್ ಇದನ್ನು ನಿರಾಕರಿಸಿದೆ. ಹೊರ್ಮುಜ್ ಜಲಸಂಧಿಯು ಅಂತರರಾಷ್ಟ್ರೀಯ ಜಲಮಾರ್ಗವಾಗಿದ್ದು, ವಾಣಿಜ್ಯ ಹಡಗುಗಳ ಸಂಚಾರಕ್ಕೆ ಮುಕ್ತವಾಗಿದೆ.

ನೌಕಾಯಾನದ ಸ್ವಾತಂತ್ರ್ಯವನ್ನು ರಕ್ಷಿಸಲು ಅಮೆರಿಕನ್ ಪಡೆಗಳು ಸಂಪೂರ್ಣ ಸನ್ನದ್ಧ ಸ್ಥಿತಿಯಲ್ಲಿವೆ ಎಂದು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಅಪಾಯದಲ್ಲಿ ಕದನ ವಿರಾಮ ಒಪ್ಪಂದಕಳೆದ ತಿಂಗಳಷ್ಟೇ ಜಲಸಂಧಿಯನ್ನು ಪುನಃ ತೆರೆಯಲು ಮತ್ತು ಶಾಂತಿ ಸ್ಥಾಪಿಸಲು ಅಮೆರಿಕ ಹಾಗೂ ಇರಾನ್ ನಡುವೆ ಮಧ್ಯಂತರ ಕದನ ವಿರಾಮ ಒಪ್ಪಂದ ಏರ್ಪಟ್ಟಿತ್ತು. ಆದರೆ ಪ್ರಸ್ತುತ ದಾಳಿಗಳಿಂದಾಗಿ ಈ ಒಪ್ಪಂದ ಮುರಿದುಬಿದ್ದಿದೆ ಎಂದು ಅಧ್ಯಕ್ಷ ಟ್ರಂಪ್ ಘೋಷಿಸಿದ್ದಾರೆ.

ಇತ್ತ ಇರಾನ್‌ನ ಸಂಸತ್ ಸ್ಪೀಕರ್ ಮೊಹಮ್ಮದ್ ಬಾಘರ್ ಘಾಲಿಬಾಫ್, “ಏಕಪಕ್ಷೀಯ ಒಪ್ಪಂದಗಳ ಕಾಲ ಮುಗಿದಿದೆ. ನಿಮ್ಮ ಮಾತನ್ನು ಉಳಿಸಿಕೊಳ್ಳಿ ಇಲ್ಲವೇ ಬೆಲೆ ತೆರಿರಿ” ಎಂದು ಅಮೆರಿಕಾಗೆ ಎಕ್ಸ್ (ಟ್ವಿಟರ್) ಮೂಲಕ ಸವಾಲು ಹಾಕಿದ್ದಾರೆ.

ಪ್ರಸ್ತುತ ಇರಾನ್‌ನ ತಂತ್ರಜ್ಞಾನ ಪ್ರಾಮುಖ್ಯತೆಯ ಕ್ಯೂಶ್ಮ್ ದ್ವೀಪದ ಮೇಲೆಯೂ ಅಮೆರಿಕ ಕ್ಷಿಪಣಿ ದಾಳಿ ನಡೆಸಿದ್ದು, ಗಲ್ಫ್ ಪ್ರದೇಶದಲ್ಲಿ ಉದ್ವಿಗ್ನತೆ ಕೋಟಿಗೆ ತಲುಪಿದೆ.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಜಾತಿ ಅಲ್ಲ, ಮಾನವತೆಯೇ ನಮ್ಮ ನಿಜವಾದ ಗುರುತು

ಇತ್ತೀಚಿನ ದಿನಗಳಲ್ಲಿ ಮಹಾರಾಷ್ಟ್ರದ ಅಹಿಲ್ಯಾನಗರ ಜಿಲ್ಲೆಯ ಸೌಂಡಾಳ ಗ್ರಾಮವು "ಜಾತಿರಹಿತ ಗ್ರಾಮ" ಎಂಬ ಸಂಕಲ್ಪದ ಮೂಲಕ ದೇಶದ ಗಮನ ಸೆಳೆದಿದೆ. ಈ ನಿರ್ಧಾರವು ಕೇವಲ ಒಂದು ಗ್ರಾಮದ ವಿಷಯವಲ್ಲ; ಸಮಾನತೆ ಮತ್ತು ಮಾನವೀಯತೆಯತ್ತ ಸಮಾಜ ಸಾಗಬೇಕಾದ ದಾರಿಯನ್ನು ತೋರಿಸುವ ಮಹತ್ವದ ಸಂದೇಶವಾಗಿದೆ.


ಭಾರತದ ಸಂವಿಧಾನವು ಎಲ್ಲ ನಾಗರಿಕರಿಗೂ ಸಮಾನ ಹಕ್ಕುಗಳನ್ನು ನೀಡಿದೆ. ಆದರೂ, ಜಾತಿಯ ಹೆಸರಿನಲ್ಲಿ ಭೇದಭಾವ, ಅಸ್ಪೃಶ್ಯತೆ ಮತ್ತು ಸಾಮಾಜಿಕ ಅಂತರಗಳು ಕೆಲವು ಕಡೆಗಳಲ್ಲಿ ಇನ್ನೂ ಕಂಡುಬರುತ್ತವೆ. ಅಭಿವೃದ್ಧಿ ಹೊಂದಿದ ಸಮಾಜದಲ್ಲಿ ವ್ಯಕ್ತಿಯ ಮೌಲ್ಯವನ್ನು ಅವನ ಜಾತಿಯಿಂದಲ್ಲ, ಅವನ ಗುಣ, ಶಿಕ್ಷಣ, ಪರಿಶ್ರಮ, ಪ್ರಾಮಾಣಿಕತೆ ಮತ್ತು ಮಾನವೀಯತೆಯಿಂದ ಅಳೆಯಬೇಕು.

ಸೌಂಡಾಳ ಗ್ರಾಮದ ಸಂಕಲ್ಪವು ಜಾತಿಯನ್ನು ಕಾನೂನಾತ್ಮಕವಾಗಿ ಅಳಿಸುವ ಪ್ರಯತ್ನವಲ್ಲ. ಬದಲಾಗಿ, ದೈನಂದಿನ ಜೀವನದಲ್ಲಿ ಜಾತಿಗಿಂತ ಮಾನವೀಯ ಸಂಬಂಧಗಳಿಗೆ ಆದ್ಯತೆ ನೀಡುವ ಸಾಮಾಜಿಕ ಬದ್ಧತೆಯಾಗಿದೆ. ಇಂತಹ ಪ್ರಯತ್ನಗಳು ಸಮಾಜದಲ್ಲಿ ಪರಸ್ಪರ ಗೌರವ, ಸಹೋದರತ್ವ ಮತ್ತು ವಿಶ್ವಾಸವನ್ನು ಹೆಚ್ಚಿಸುತ್ತವೆ.

ಜಾತಿಯ ಗೋಡೆಗಳು ಕುಸಿದಾಗ ಮಾತ್ರ ಸಮಾನ ಅವಕಾಶಗಳು ಎಲ್ಲರಿಗೂ ದೊರೆಯುತ್ತವೆ. ಶಿಕ್ಷಣ, ಉದ್ಯೋಗ, ಸಾರ್ವಜನಿಕ ಸೇವೆಗಳು ಮತ್ತು ಸಾಮಾಜಿಕ ಬದುಕಿನಲ್ಲಿ ಪ್ರತಿಯೊಬ್ಬರಿಗೂ ಗೌರವ ದೊರೆಯುವ ವಾತಾವರಣ ನಿರ್ಮಾಣವಾಗಬೇಕು. ಅದೇ ನಮ್ಮ ಸಂವಿಧಾನದ ಆಶಯವೂ ಆಗಿದೆ.

ಬದಲಾವಣೆ ಸರ್ಕಾರದಿಂದ ಮಾತ್ರ ಸಾಧ್ಯವಿಲ್ಲ. ಪ್ರತಿಯೊಬ್ಬ ನಾಗರಿಕನ ಮನಸ್ಸಿನಲ್ಲಿ ಸಮಾನತೆಯ ಚಿಂತನೆ ಮೂಡಿದಾಗ ಮಾತ್ರ ನಿಜವಾದ ಪರಿವರ್ತನೆ ಸಾಧ್ಯ. ಮಕ್ಕಳಿಗೆ ಬಾಲ್ಯದಿಂದಲೇ ಮಾನವೀಯತೆ, ಪರಸ್ಪರ ಗೌರವ ಮತ್ತು ಸಹಬಾಳ್ವೆಯ ಮೌಲ್ಯಗಳನ್ನು ಕಲಿಸುವುದು ನಮ್ಮ ಕರ್ತವ್ಯವಾಗಿದೆ.

ಜಾತಿ ಮನುಷ್ಯನನ್ನು ವಿಭಜಿಸುತ್ತದೆ; ಮಾನವತೆ ಮನುಷ್ಯನನ್ನು ಒಂದಾಗಿಸುತ್ತದೆ. ನಾವು ಯಾವ ಜಾತಿಯಲ್ಲಿ ಹುಟ್ಟಿದ್ದೇವೆ ಎನ್ನುವುದಕ್ಕಿಂತ, ನಾವು ಹೇಗೆ ಬದುಕಿದ್ದೇವೆ ಎಂಬುದೇ ಸಮಾಜ ನೆನಪಿಸಿಕೊಳ್ಳುತ್ತದೆ. ಆದ್ದರಿಂದ ಜಾತಿಗಿಂತ ಮಾನವತೆಯನ್ನು ದೊಡ್ಡದಾಗಿ ಕಾಣುವ ಮನೋಭಾವವೇ ನವಭಾರತದ ನಿಜವಾದ ಶಕ್ತಿಯಾಗಲಿ.




ನಮ್ಮ ಜಾತಿ ಮನುಷತ್ವ ಎಲ್ಲರನ್ನೂ ಮಾನವೀಯತೆಯಿಂದ ಕಾಣುವುದು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ

**–ಗಂಗಶ್ರೀ ವಿಶ್ವಕರ್ಮ ಮಾನವಿ**

# ಮಕ್ಕಳನ್ನು ಪ್ರೀತಿಸಿ, ಆದರೆ ಒತ್ತಡ ಹೇರಬೇಡಿ: ಮನೋವಿಕಾಸ ತಜ್ಞ ಮಹೇಶ್ ಮಾಶ್ಯಾಳ್




**ಕಲಬುರಗಿ,ಜು.13:** ಮಕ್ಕಳನ್ನು ಪ್ರೀತಿಸಿ, ಆದರೆ ಅವರ ಮೇಲೆ ನಿಮ್ಮ ಕನಸುಗಳು ಮತ್ತು ನಿರೀಕ್ಷೆಗಳ ಭಾರವನ್ನು ಹೊರಿಸಬೇಡಿ. ಪ್ರತಿಯೊಬ್ಬಮಗುವೂ ತನ್ನದೇ ಆದ ಪ್ರತಿಭೆ, ಸಾಮರ್ಥ್ಯ ಮತ್ತು ಕನಸುಗಳನ್ನು ಹೊಂದಿರುತ್ತದೆ. ಪೋಷಕರು ಮಕ್ಕಳನ್ನು ಇತರರೊಂದಿಗೆ ಹೋಲಿಕೆಮಾಡದೆ, ಅವರ ಆಸಕ್ತಿ ಮತ್ತು ಸಾಮರ್ಥ್ಯವನ್ನು ಗುರುತಿಸಿ ಪ್ರೋತ್ಸಾಹಿಸಿದಾಗ ಮಾತ್ರ ಅವರು ಆತ್ಮವಿಶ್ವಾಸದಿಂದ ಬೆಳೆಯಲುಸಾಧ್ಯವಾಗುತ್ತದೆ” ಎಂದು ಖ್ಯಾತ ಮಾನವ ಮನೋವಿಕಾಸ ತರಬೇತುದಾರ, ಲೇಖಕ ಹಾಗೂ ವಿಸ್ತಾರ್ ಜಿಂದಗಿ ಸಂಸ್ಥೆಯ ಸಂಸ್ಥಾಪಕ–ನಿರ್ದೇಶಕ ಮಹೇಶ್ ಮಾಶ್ಯಾಳ್ ಅವರು ಅಭಿಪ್ರಾಯಪಟ್ಟರು.
ಶರಣಬಸವೇಶ್ವರ ವಸತಿ ಸಂಯುಕ್ತ ಪದವಿಪೂರ್ವ ಕಾಲೇಜು ವತಿಯಿಂದ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗಾಗಿ, ಜು. 12ಹಾಗೂ 13 ರಂದು ಎರಡು ದಿನಗಳ ಕಾಲ ನಡೆಯುವ ‘ಪರಿಚಯ–2026’ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.
ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಮಹೇಶ್ ಮಾಶ್ಯಾಳ್ ಅವರು, ಪದವಿಪೂರ್ವ ಶಿಕ್ಷಣವು ಜೀವನದಅತ್ಯಂತ ಮಹತ್ವದ ಘಟ್ಟವಾಗಿದ್ದು, ಈ ಎರಡು ವರ್ಷಗಳು ವಿದ್ಯಾರ್ಥಿಗಳ ವ್ಯಕ್ತಿತ್ವ, ಚಿಂತನಾ ಶೈಲಿ ಮತ್ತು ವೃತ್ತಿಜೀವನದ ಭದ್ರಬುನಾದಿಯನ್ನು ನಿರ್ಮಿಸುತ್ತವೆ ಎಂದರು. ಕೇವಲ ಅಂಕಗಳಿಗಾಗಿ ಓದುವುದಕ್ಕಿಂತ ಜ್ಞಾನ ಸಂಪಾದನೆ, ಉತ್ತಮ ವ್ಯಕ್ತಿತ್ವ ನಿರ್ಮಾಣ ಹಾಗೂಜೀವನ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಹೆಚ್ಚು ಮುಖ್ಯ ಎಂದು ತಿಳಿಸಿದರು. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯಶಸ್ಸು ಸಾಧಿಸಲುಕಠಿಣ ಪರಿಶ್ರಮ, ಸಮಯಪಾಲನೆ, ಆತ್ಮವಿಶ್ವಾಸ, ಸಕಾರಾತ್ಮಕ ಮನೋಭಾವ ಮತ್ತು ನಿರಂತರ ಕಲಿಕೆಯ ಮನೋಭಾವ ಅತ್ಯಗತ್ಯವಾಗಿದೆ.ಪ್ರತಿದಿನ ಹೊಸದನ್ನು ಕಲಿಯುವ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ದುರ್ಬಳಕೆಯಿಂದದೂರವಿದ್ದು, ಸಮಯವನ್ನು ಸದುಪಯೋಗಪಡಿಸಿಕೊಂಡರೆ ಯಾವುದೇ ಗುರಿಯನ್ನು ಸಾಧಿಸಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆನೀಡಿದರು. ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಪ್ರೀತಿ, ವಿಶ್ವಾಸ, ಸಂಸ್ಕಾರ ಮತ್ತು ನೈತಿಕ ಮೌಲ್ಯಗಳನ್ನು ನೀಡಬೇಕು.ಮಕ್ಕಳು ಯಶಸ್ಸಿಗಿಂತ ಉತ್ತಮ ಮನುಷ್ಯರಾಗುವುದು ಮುಖ್ಯ. ಕುಟುಂಬದ ಬೆಂಬಲ, ಶಿಕ್ಷಕರ ಮಾರ್ಗದರ್ಶನ ಮತ್ತು ವಿದ್ಯಾರ್ಥಿಗಳ ಪರಿಶ್ರಮ ಒಂದಾದಾಗ ಅತ್ಯುತ್ತಮ ಫಲಿತಾಂಶ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.ಭಾರತಿ ಇನ್‌ಸ್ಟಿಟ್ಯೂಟ್‌ನ ಪ್ರೇರಣಾದಾಯಕ ವಾಗ್ಮಿ ಹಾಗೂ ಜೀವನ ಮಾರ್ಗದರ್ಶಕರಾದ ಮೇಜರ್ ಸಿ.ಎಸ್. ಆನಂದ್ (ನಿವೃತ್ತ) ಮಾತನಾಡಿ, “ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ನೀಡುವುದು ಪೋಷಕರ ದೊಡ್ಡಜವಾಬ್ದಾರಿಯಾಗಿದೆ” ಎಂದು ಹೇಳಿದರು. ದೇಶಪ್ರೇಮ, ಶಿಸ್ತು, ಸಮಯಪಾಲನೆ ಮತ್ತು ಮಾನವೀಯ ಮೌಲ್ಯಗಳು ಪ್ರತಿಯೊಬ್ಬವಿದ್ಯಾರ್ಥಿಯ ಬದುಕಿನ ಅವಿಭಾಜ್ಯ ಅಂಗವಾಗಬೇಕು ಎಂದು ಅವರು ತಿಳಿಸಿದರು. ಸವಾಲುಗಳನ್ನು ಧೈರ್ಯದಿಂದ ಎದುರಿಸುವಮನೋಬಲವನ್ನು ಬೆಳೆಸಿಕೊಳ್ಳಬೇಕು. ಸೋಲಿಗೆ ಹೆದರದೆ ಆತ್ಮವಿಶ್ವಾಸದಿಂದ ಮುಂದುವರಿದರೆ ಯಶಸ್ಸು ಖಂಡಿತ ದೊರೆಯುತ್ತದೆ ಎಂದು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು.
ಕಾಲೇಜಿನ ಮೇಲ್ವಿಚಾರಕ ಡಾ. ಶ್ರೀಶೈಲ ಜಿ. ಹೊಗಾಡೆ ಅವರು ಮಾತನಾಡಿ, ಗುಣಮಟ್ಟದ ಶಿಕ್ಷಣದೊಂದಿಗೆ ವಿದ್ಯಾರ್ಥಿಗಳಸರ್ವತೋಮುಖ ಅಭಿವೃದ್ಧಿಗೆ ಕಾಲೇಜು ಬದ್ಧವಾಗಿದೆ ಎಂದು ತಿಳಿಸಿದರು.
ಇದಕ್ಕೂ ಮೊದಲು, ಕಾಲೇಜಿನ ಹಿಂದಿ ವಿಭಾಗದ ಮುಖ್ಯಸ್ಥರಾದ ಡಾ. ಚಂದ್ರಕಾಂತ ಪಾಟೀಲ ಅವರು ಅತಿಥಿಗಳನ್ನು ಸ್ವಾಗತಿಸಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು ಮಾತನಾಡಿ, ಸಂಸ್ಥಾಪಕ ಅಧ್ಯಕ್ಷರಾದ ಲಿಂಗೈಕ್ಯ ವಿದ್ಯಾಭಂಡಾರಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಶಿಕ್ಷಣಸೇವೆಯನ್ನು ಸ್ಮರಿಸಿದರು. ವಿದ್ಯಾರ್ಥಿಗಳು ದೃಢಸಂಕಲ್ಪದಿಂದ ವಿದ್ಯಾಭ್ಯಾಸ ಮಾಡಿ ಉಜ್ವಲ ಭವಿಷ್ಯವನ್ನು ನಿರ್ಮಿಸಿಕೊಳ್ಳಬೇಕು ಎಂದುಕರೆ ನೀಡಿದರು.

ಕಾಲೇಜಿನ ಪ್ರಾಚಾರ್ಯ ಎನ್. ಎಸ್. ದೇವರಕಲ್ ಅವರ ಮಾರ್ಗದರ್ಶನದಂತೆ ನಡೆದ ಈ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು. ಕಾರ್ಯಕ್ರಮವನ್ನು ವಿದ್ಯಾರ್ಥಿಗಳಾದ ರಕ್ಷಿತಾ ಮತ್ತು ವೈಷ್ಣವಿ ನಿರೂಪಿಸಿದರು. ಪೃಥ್ವಿ ಮುಖ್ಯ ಅತಿಥಿಗಳನ್ನು ಪರಿಚಯಿಸಿದರೆ, ಸಾಹನಾ ವಂದನಾರ್ಪಣೆ ಸಲ್ಲಿಸಿದರು.
ಇನ್ನಷ್ಟು ಅನ್ವೇಷಿಸಿ

# ಬ್ಯಾಂಕಾಕ್ ಬಾರ್‌ನಲ್ಲಿ ಅಗ್ನಿ ದುರಂತ:27ಮಂದಿ ಸಜೀವ ದಹನ

**ಬ್ಯಾಂಕಾಕ್,ಜು13:** ಥೈಲ್ಯಾಂಡ್‌ನ ರಾಜಧಾನಿ ಬ್ಯಾಂಕಾಕ್‌ನ ಪ್ರಸಿದ್ಧ ಬಾರ್ ಮತ್ತು ರೆಸ್ಟೋರೆಂಟ್ ಒಂದರಲ್ಲಿ ಮಧ್ಯರಾತ್ರಿ ಸಂಭವಿಸಿದ ಭೀಕರ ಅಗ್ನಿ ದುರಂತದಲ್ಲಿ ಕನಿಷ್ಠ 27 ಜನರು ಸಜೀವ ದಹನವಾಗಿದ್ದು, 60ಕ್ಕೂ ಹೆಚ್ಚು ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ಮೃತರ ಪೈಕಿ 9 ಪುರುಷರು ಮತ್ತು 18 ಮಹಿಳೆಯರು ಸೇರಿದ್ದಾರೆ ಎಂದು ವರದಿಯಾಗಿದೆ. ಬ್ಯಾಂಕಾಕ್‌ನ ಚತುಚಾಕ್ ಜಿಲ್ಲೆಯಲ್ಲಿರುವ ಜನಪ್ರಿಯ ಮನರಂಜನಾ ತಾಣವಾದ ರೋಂಗ್ ಬೀರ್ ನಾ ಲಾತ್ ಪ್ರಾವೋ ಬಾರ್‌ನಲ್ಲಿ ಈ ಘಟನೆ ನಡೆದಿದೆ.ತಡರಾತ್ರಿ ಸುಮಾರು 11:30ರ ಸುಮಾರಿಗೆ ಬಾರ್‌ನಲ್ಲಿ ಸಂಗೀತ ಕಾರ್ಯಕ್ರಮ ನಡೆಯುತ್ತಿದ್ದಾಗ ಈ ಅವಘಡ ಸಂಭವಿಸಿದೆ. ಬಾರ್‌ನ ಕಟ್–ಔಟ್ ಸ್ವಿಚ್ ಬೋರ್ಡ್‌ನಲ್ಲಿ ಹಠಾತ್ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಕಿಡಿ ಹೊತ್ತಿಕೊಂಡಿದೆ ಎಂದು ಅಲ್ಲಿ ಪ್ರದರ್ಶನ ನೀಡುತ್ತಿದ್ದ ಸಂಗೀತಗಾರರೊಬ್ಬರು ತಿಳಿಸಿದ್ದಾರೆ. ಕೇವಲ ಕೆಲವೇ ಕ್ಷಣಗಳಲ್ಲಿ ಇಡೀ ಕಟ್ಟಡಕ್ಕೆ ಬೆಂಕಿ ವ್ಯಾಪಿಸಿದ್ದು, ಬಾರ್‌ನ ಒಳಗಿದ್ದ ನೂರಾರು ಗ್ರಾಹಕರು ದಿಕ್ಕಾಪಾಲಾಗಿ ಓಡಲಾರಂಭಿಸಿದರು.ಬೆಂಕಿ ಹರಡುತ್ತಿದ್ದಂತೆ ದಟ್ಟವಾದ ಹೊಗೆ ಆವರಿಸಿಕೊಂಡಿದ್ದರಿಂದ ರಕ್ಷಣೆಗೆ ದಾರಿ ಕಾಣದೆ ಹಲವರು ಕಟ್ಟಡದ ಹಿಂಭಾಗಕ್ಕೆ ಓಡಿ ಶೌಚಾಲಯದಲ್ಲಿ ಅಡಗಿಕೊಂಡಿದ್ದರು. ಆದರೆ, ಹೊಗೆ ಮತ್ತು ವಿಷಕಾರಿ ಅನಿಲದ ತೀವ್ರತೆಗೆ ಸಿಲುಕಿ ಶೌಚಾಲಯದ ಒಳಗಡೆಯೇ ಅತಿ ಹೆಚ್ಚು ಮೃತದೇಹಗಳು ಪತ್ತೆಯಾಗಿವೆ ಎಂದು ಥೈಲ್ಯಾಂಡ್ ಪ್ರಧಾನಿ ಅನುಟಿನ್ ಚಾರ್ನ್ವಿರಾಕುಲ್ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಗಾಯಾಳುಗಳನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ. ಇನ್ನು ಹಲವರು ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ. ಘಟನಾ ಸ್ಥಳಕ್ಕೆ ಭೇಟಿ ನೀಡಿದ ಬ್ಯಾಂಕಾಕ್ ಗವರ್ನರ್ ಚಾಚಾರ್ತ್ ಸಿತ್ತಿಪಂಟ್ ಮಾತನಾಡಿ, ಬಾರ್‌ನ ಒಳಾಂಗಣ ವಿನ್ಯಾಸಕ್ಕೆ ಬಳಸಲಾಗಿದ್ದ ದಹನಕಾರಿ ವಸ್ತುಗಳಿಂದಾಗಿ ಬೆಂಕಿ ಕ್ಷಣಮಾತ್ರದಲ್ಲಿ ಹರಡಿದೆ. ಅಲ್ಲದೆ, ಬಾರ್‌ನ ತುರ್ತು ನಿರ್ಗಮನ ದಾರಿಗಳ ಬಳಿ ವ್ಯಾಪಾರಕ್ಕಾಗಿ ಮೇಜುಗಳನ್ನು ಹಾಕಿ ರಸ್ತೆಯನ್ನು ನಿಬಂಧಿಸಲಾಗಿತ್ತು ಎಂಬ ಮಾಹಿತಿ ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.



ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಸುಮಾರು ಅರ್ಧ ಗಂಟೆಯ ಸತತ ಕಾರ್ಯಾಚರಣೆಯ ನಂತರ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ. ಸದ್ಯ ಘಟನೆಯ ಕುರಿತು ವಿಧಿವಿಜ್ಞಾನ ಅಧಿಕಾರಿಗಳು ಅಧಿಕೃತ ತನಿಖೆಯನ್ನು ಕೈಗೆತ್ತಿಕೊಂಡಿದ್ದಾರೆ.

# ಪೌರತ್ವ ನಿರ್ಧಾರ,ನ್ಯಾಯಯುತ ಪ್ರಕ್ರಿಯೆ ಅಗತ್ಯ




**ನವದೆಹಲಿ,ಜು.13:**ಪೌರತ್ವ ಅಥವಾ ವಿದೇಶಿ ಪ್ರಜೆ ಎಂಬ ಸ್ಥಾನಮಾನವನ್ನು ನಿರ್ಧರಿಸುವಾಗ ಪ್ರಕ್ರಿಯೆಯು ಸಂಪೂರ್ಣವಾಗಿ 'ನ್ಯಾಯಯುತ, ಕಾನೂನುಬದ್ಧ ಮತ್ತು ತಾರ್ಕಿಕ'ವಾಗಿರಬೇಕು ಎಂದು ಸುಪ್ರೀಂ ಕೋರ್ಟ್ ಇಂದು ಮಹತ್ವದ ತೀರ್ಪು ನೀಡಿದೆ.

ಅಸ್ಸಾಂನ 27 ನಿವಾಸಿಗಳನ್ನು 'ವಿದೇಶಿಗರು' ಎಂದು ಘೋಷಿಸಿದ್ದ ಗುವಾಹಟಿ ಹೈಕೋರ್ಟ್‌ನ ಆದೇಶಗಳನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ. ಅಲ್ಲದೆ, ಈ ಪ್ರಕರಣಗಳನ್ನು ಹೊಸದಾಗಿ ಪರಿಶೀಲಿಸುವಂತೆ ಸಂಬಂಧಪಟ್ಟ ವಿದೇಶಿಯರ ನ್ಯಾಯಾಧಿಕರಣಗಳಿಗೆ ಮರು ಆದೇಶಿಸಿದೆ

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು ಈ 27 ಮೇಲ್ಮನವಿಗಳನ್ನು ಪುರಸ್ಕರಿಸಿ ಈ ತೀರ್ಪು ಪ್ರಕಟಿಸಿದೆ. ಪೌರತ್ವವು ಅತ್ಯುನ್ನತ ಸಾಂವಿಧಾನಿಕ ಮತ್ತು ಕಾನೂನು ಪ್ರಾಮುಖ್ಯತೆಯನ್ನು ಹೊಂದಿರುವ ವಿಷಯವಾಗಿದ್ದು, ಇದರ ನಿರ್ಧಾರದ ವೇಳೆ ನ್ಯಾಯಸಮ್ಮತತೆಯ ತತ್ವಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಪೀಠ ಒತ್ತಿಹೇಳಿದೆ.

"ಪೌರತ್ವ ಮತ್ತು ವಿದೇಶಿ ಸ್ಥಾನಮಾನದ ವಿಷಯಗಳು ಅತ್ಯಂತ ಸೂಕ್ಷ್ಮ ಹಾಗೂ ಕಾನೂನು ಮಹತ್ವವನ್ನು ಹೊಂದಿವೆ. ಅರ್ಹರಲ್ಲದ ವ್ಯಕ್ತಿಗಳು ಸುಳ್ಳು ದಾಖಲೆಗಳ ಮೂಲಕ ಅಥವಾ ಕಾನೂನಿನ ವಿಳಂಬದ ದುರುಪಯೋಗಪಡಿಸಿಕೊಂಡು ಭಾರತೀಯ ಪೌರತ್ವವನ್ನು ಪಡೆಯದಂತೆ ತಡೆಯಲು ರಾಜ್ಯ ಸರ್ಕಾರಕ್ಕೆ ಸಂಪೂರ್ಣ ಹಕ್ಕಿದೆ. ಆದರೆ, ಈ ಪ್ರಕ್ರಿಯೆಯಲ್ಲಿ ನಿಗದಿಪಡಿಸಲಾದ ಸಾಂವಿಧಾನಿಕ ಸುರಕ್ಷತಾ ಕ್ರಮಗಳು ಮತ್ತು ನ್ಯಾಯಸಮ್ಮತತೆಯನ್ನು ಯಾವುದೇ ಕಾರಣಕ್ಕೂ ನಿರ್ಲಕ್ಷಿಸುವಂತಿಲ್ಲ," ಎಂದು ಸುಪ್ರೀಂ ಕೋರ್ಟ್ ಪೀಠ ಸ್ಪಷ್ಟಪಡಿಸಿದೆ.

ಅಲ್ಲದೆ, ವಿದೇಶಿಯರ ಕಾಯ್ದೆ 1946ರ ಸೆಕ್ಷನ್ 9ರ ಅಡಿಯಲ್ಲಿ ತಾವೊಬ್ಬರು ಭಾರತೀಯ ಪ್ರಜೆ ಎಂದು ಸಾಬೀತುಪಡಿಸುವ ಹೊಣೆಗಾರಿಕೆ ಅರ್ಜಿದಾರರ ಮೇಲೆಯೇ ಇರುತ್ತದೆ ಎಂದು ಕೋರ್ಟ್ ನೆನಪಿಸಿದೆ.

ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ 27 ವ್ಯಕ್ತಿಗಳಲ್ಲಿ ಪ್ರಮುಖರಾದ ಸಬಿತ್ರಿ ದೇಯ್, ಅಜ್ಬಹರ್ ಅಲಿ, ಮೊಹಮ್ಮದ್ ಅಕ್ಬರ್ ಅಲಿ, ಅಬೇದಾ ಖಾತುನ್ ಮತ್ತು ಅನೋವರಾ ಖಾತುನ್ ಅವರು, "ಹಳೆಯ ಮತದಾರರ ಪಟ್ಟಿಗಳಲ್ಲಿ ಕೇವಲ ಕಾಗುಣಿತ ತಪ್ಪುಗಳು ಮತ್ತು ಹೆಸರಿನಲ್ಲಿದ್ದ ಸಣ್ಣಪುಟ್ಟ ವ್ಯತ್ಯಾಸಗಳಂತಹ ತಾಂತ್ರಿಕ ಕಾರಣಗಳನ್ನು ಮುಂದಿಟ್ಟುಕೊಂಡು ನಮ್ಮನ್ನು ವಿದೇಶಿಗರು ಎಂದು ಘೋಷಿಸಲಾಗಿದೆ," ಎಂದು ನ್ಯಾಯಾಲಯಕ್ಕೆ ದೂರಿದ್ದರು.

ಸುಪ್ರೀಂ ಕೋರ್ಟ್‌ನ ಈ ಆದೇಶವು ಕೇವಲ ನ್ಯಾಯಯುತ ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ನೀಡಲಾಗಿದೆಯೇ ಹೊರತು, ಅರ್ಜಿದಾರರ ಪೌರತ್ವದ ಅರ್ಹತೆಯನ್ನು ಕೋರ್ಟ್ ಪರಿಶೀಲಿಸಿಲ್ಲ. "ನಾವು ಅರ್ಜಿದಾರರು ಸಲ್ಲಿಸಿರುವ ಯಾವುದೇ ದಾಖಲೆಗಳ ಸಿಂಧುತ್ವ, ಸತ್ಯಾಸತ್ಯತೆ ಅಥವಾ ಪೌರತ್ವದ ಅರ್ಹತೆಯ ಬಗ್ಗೆ ಯಾವುದೇ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಿಲ್ಲ. ಇದನ್ನು ನ್ಯಾಯಾಧಿಕರಣಗಳು ಸ್ವತಂತ್ರವಾಗಿ ನಿರ್ಧರಿಸಬೇಕು. ಒಂದು ವೇಳೆ ನ್ಯಾಯಾಧಿಕರಣದ ಮುಂದೆ ಪೌರತ್ವ ಸಾಬೀತುಪಡಿಸಲು ವಿಫಲರಾದರೆ, ಈ ರಿಮಾಂಡ್ ಆದೇಶವು ಅವರಿಗೆ ಯಾವುದೇ ಹೆಚ್ಚುವರಿ ರಕ್ಷಣೆ ನೀಡುವುದಿಲ್ಲ," ಎಂದು ಕೋರ್ಟ್ ಸ್ಪಷ್ಟಪಡಿಸಿದೆ.


ಹಳೆಯ ಆದೇಶಗಳಿಂದ ಪ್ರಭಾವಿತರಾಗದೆ, ವಿದೇಶಿಯರ ಕಾಯ್ದೆ 1946 ಮತ್ತು ವಿದೇಶಿಯರ (ನ್ಯಾಯಾಧಿಕರಣ) ಆದೇಶ 1964ರ ಅಡಿಯಲ್ಲಿ ಸಂಪೂರ್ಣವಾಗಿ ಸ್ವತಂತ್ರವಾಗಿ ಮತ್ತು ನಿಯಮಾನುಸಾರ ಹೊಸ ವಿಚಾರಣೆ ನಡೆಸಿ ತೀರ್ಪು ನೀಡುವಂತೆ ಟ್ರಿಬ್ಯುನಲ್‌ಗಳಿಗೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ.

# ಜೂಜಾಟ:10 ಜನರ ಬಂಧನ

**ಕಲಬುರಗಿ,ಜು.13–**ಆರ್.ಜಿ.ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಕೀರ್ತಿ ನಗರ ಸರಕಾರಿ ಶಾಲೆ ಹತ್ತಿರ ಮತ್ತು ವಿಶ್ವ ವಿದ್ಯಾಲಯ ಪೊಲೀಸ್ ಠಾಣೆ ವ್ಯಾಪ್ತಿಯ ಕೋಟನೂರ (ಡಿ) ಸೀಮಾಂತರದ ಕೇರಿಬಸಮ್ಮ ದೇವಸ್ಥಾನ ಹತ್ತಿರ ಜೂಜಾಟವಾಡುತ್ತಿದ್ದ 10 ಜನರನ್ನು ಪೊಲೀಸರು ಬಂಧಿಸಿದ್ದಾರೆ.
ನಗರದ ಕೀರ್ತಿ ನಗರ ಸರಕಾರಿ ಶಾಲೆ ಹತ್ತಿರ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಆರ್.ಜಿ.ನಗರ ಪೊಲೀಸ್ ಠಾಣೆ ಎಎಸ್ಐ ಮಲ್ಲಿಕಾರ್ಜುನ ಜಾನೆ, ಸಿಬ್ಬಂದಿಗಳಾದ ಮಲ್ಲನಗೌಡ, ಉಮೇಶ ಮತ್ತು ಆರೇಶ್ ಅವರು ದಾಳಿ ನಡೆಸಿ ಶಬ್ಬೀರ್ ಮೂಲಗೆ, ಸತೀಶ್ ಹೋಳ್ಕರ್, ಶಿವಕುಮಾರ ದೊಡ್ಡಮನಿ, ಸೈಫನ್ ಖುರೇಷಿ, ರಾಘವೇಂದ್ರ ಭಾರತಿ ಎಂಬುವವರನ್ನು ಬಂಧಿಸಿ 19,070 ನಗದು ಜಪ್ತಿ ಮಾಡಿದ್ದಾರೆ.
ವಿಶ್ವವಿದ್ಯಾಲಯ ಪೊಲೀಸ್ ಠಾಣೆ ವ್ಯಾಪ್ತಿಯ ಕೋಟನೂರ (ಡಿ) ಸೀಮಾಂತರದ ಕೇರಿ ಬಸಮ್ಮ ದೇವಸ್ಥಾನದ ಹತ್ತಿರ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಪಿಐ ಚಂದ್ರಶೇಖರ್, ಸಿಬ್ಬಂದಿಗಳಾದ ಈರಣ್ಣ, ಫಿರೋಜ್ ಖಾನ್, ವಿಠೋಬಾ ಮತ್ತು ಬೋಗೇಶ್ ಅವರು ದಾಳಿ ನಡೆಸಿ ಬಾಬುರಾವ ತಳವಾರ, ನಾಗರೆಡ್ಡಿ, ಹಣಮಂತರಾಯ ಕುಂಬಾರ, ಸತೀಶ್ ಯಾದವ್, ಸಿದ್ದಣ್ಣ ಹೊನ್ನಕೆರೆ ಎಂಬುವವರನ್ನು ಬಂಧಿಸಿ 7,100 ರೂ.ನಗದು ಜಪ್ತಿ ಮಾಡಿದ್ದಾರೆ.
ಆರ್.ಜಿ.ನಗರ ಮತ್ತು ವಿಶ್ವವಿದ್ಯಾಲಯ ಪೊಲೀಸ್ ಠಾಣೆಗಳಲ್ಲಿ ಪ್ರತ್ಯಕ ಪ್ರಕರಣ ದಾಖಲಾಗಿದೆ.

# ರೈತರಿಗೆ 50 ಸಾವಿರ ತುರ್ತು ಪರಿಹಾರಕ್ಕೆ ಬಿವೈವಿ ಆಗ್ರಹ

**ಬೀದರ್, ಜು. 13–** ಬರದಿಂದ ಸಂಕಷ್ಟಕ್ಕೆ ಒಳಗಾಗಿರುವ ರೈತರಿಗೆ ಪ್ರತಿ ಎಕರೆಗೆ 50,000ಗಳ ರೂಪಾಯಿಗಳ ತುರ್ತು ಪರಿಹಾರ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ ಬೀದರ್ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕರ್ನಾಟಕ ಉತ್ತರ ಮತ್ತು ಕಲ್ಯಾಣ ಕರ್ನಾಟಕದ ಬರಪೀಡಿತ ರೈತರ ಬಗ್ಗೆ ರಾಜ್ಯ ಕಾಂಗ್ರೆಸ್ ಸರ್ಕಾರ ತೀವ್ರ ನಿರ್ಲಕ್ಷ ತೋರುತ್ತಿದೆ ಎಂದು ದೂರಿದರು ಬೀದರ್, ಗುಲ್ಬರ್ಗ (ಕಲಬುರಗಿ) ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೇವಲ ಶೇಕಡಾ 12 ರಷ್ಟು ಮಳೆಯಾಗಿದ್ದು, ರೈತರ ಪರಿಸ್ಥಿತಿ ತೀರಾ ಹದಗೆಟ್ಟಿದೆ ಕೃಷಿ ವಲಯಕ್ಕೆ ತಕ್ಷಣವೇ ಆರ್ಥಿಕ ನೆರವು ನೀಡಬೇಕೆಂದು ಆಗ್ರಹಿಸಿದರು.



"ಮಳೆ ಕೈಕೊಟ್ಟ ಕಾರಣ ಈ ಭಾಗದಲ್ಲಿ 30 ಲಕ್ಷಕ್ಕೂ ಹೆಚ್ಚು ಹೆಕ್ಟೇರ್ ಕೃಷಿ ಭೂಮಿಯಲ್ಲಿ ಬಿತ್ತನೆಯೇ ಆಗದೆ ರೈತರು ಪರದಾಡುತ್ತಿದ್ದಾರೆ. ತೊಗರಿ, ಸೂರ್ಯಕಾಂತಿ ಮತ್ತು ಹತ್ತಿಯಂತಹ ಪ್ರಮುಖ ಬೆಳೆಗಳನ್ನು ಬಿತ್ತನೆ ಮಾಡಲು ಸಾಧ್ಯವಾಗದೆ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ," ಎಂದು ಮುಖ್ಯಮಂತ್ರಿಗಳ ಫೋಟೋಶೂಟ್.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಇತ್ತೀಚಿನ ಬಸವಕಲ್ಯಾಣ ಭೇಟಿಯನ್ನು ಕೇವಲ "ಫೋಟೋ ಶೂಟ್" ಎಂದು ವ್ಯಂಗ್ಯವಾಡಿದ ವಿಜಯೇಂದ್ರ ಅವರು, ಸರ್ಕಾರದಿಂದ ತಳಮಟ್ಟದಲ್ಲಿ ಯಾವುದೇ ವಾಸ್ತವಿಕ ಪರಿಹಾರ ಸಿಕ್ಕಿಲ್ಲ ಎಂದು ಆರೋಪಿಸಿದರು.

ಪ್ರಸ್ತುತ ತೀವ್ರ ಸಂಕಷ್ಟದಲ್ಲಿರುವ ರೈತರ ಕೈಹಿಡಿಯಲು ರಾಜ್ಯ ಸರ್ಕಾರ ತಕ್ಷಣವೇ ಪ್ರತಿ ಎಕರೆಗೆ ಕನಿಷ್ಠ 50,000 ಪರಿಹಾರ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಹಿಂದೆ ಬಿ. ಎಸ್. ಯಡಿಯೂರಪ್ಪ ಅವರ ನೇತೃತ್ವದ ಬಿಜೆಪಿ ಸರ್ಕಾರವು ಅತ್ಯಂತ ಮುತುವರ್ಜಿ ವಹಿಸಿ 100 ಕೋಟಿ ಹಾಗೂ 200 ಕೋಟಿಗಳನ್ನು ಹಂತ–ಹಂತವಾಗಿ ಬಿಡುಗಡೆ ಮಾಡಿ, ಸುಮಾರು 500 ಕೋಟಿ ವೆಚ್ಚದ ಯೋಜನೆಯನ್ನು ಆರಂಭಿಸಿತ್ತು ಎಂಬುದನ್ನು ಸಾರ್ವಜನಿಕರಿಗೆ ನೆನಪಿಸಿದರು. ಆದರೆ, ಕಳೆದ ಮೂರು ವರ್ಷಗಳಲ್ಲಿ ಕಾಂಗ್ರೆಸ್ ಸರ್ಕಾರವು ಜನರ ಒತ್ತಾಯದ ನಡುವೆಯೂ ಈ ಯೋಜನೆಯ ಬಗ್ಗೆ ತಲೆಕೆಡಿಸಿಕೊಳ್ಳದೆ ನಿರ್ಲಕ್ಷಿಸಿದೆ ಎಂದು ಆರೋಪಿಸಿದರು. ಸಿಎಂ ಅವರು ತಕ್ಷಣವೇ ಬಾಕಿ ಹಣವನ್ನು ಬಿಡುಗಡೆ ಮಾಡಿ, ಇದರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಬೀದರ್ ಜಿಲ್ಲಾ ಬಿಜೆಪಿ ಘಟಕದಲ್ಲಿನ ಆಂತರಿಕ ಭಿನ್ನಾಭಿಪ್ರಾಯಗಳ ಕುರಿತ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ ಅವರು, ಎಲ್ಲಾ ಸ್ಥಳೀಯ ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಚರ್ಚಿಸಿ ಬಗೆಹರಿಸಲು ಕೋರ್ ಕಮಿಟಿ ಸಭೆಯನ್ನು ಕರೆಯಲಾಗಿದೆ ಎಂದು ಪ್ರಕಟಿಸಿದರು.

ಬೀದರ್‌ನಲ್ಲಿ ಬಿಜೆಪಿ ಶಾಸಕರು ಮತ್ತು ಕಾಂಗ್ರೆಸ್ ಪಕ್ಷದ ನಡುವೆ ಯಾವುದೇ ರೀತಿಯ "ಹೊಂದಾಣಿಕೆ ರಾಜಕಾರಣ" ನಡೆಯುತ್ತಿದೆ ಎಂಬ ಆರೋಪಗಳನ್ನು ಅವರು ಬಲವಾಗಿ ತಳ್ಳಿಹಾಕಿದರು. ಬಿಜೆಪಿ ಪಕ್ಷವು ಜನರ ಮತ್ತು ರೈತರ ಕಲ್ಯಾಣಕ್ಕಾಗಿ ಹೋರಾಡುವ ಪ್ರಬಲ ವಿರೋಧ ಪಕ್ಷವಾಗಿ ದೃಢವಾಗಿ ನಿಂತಿದೆ ಎಂದು ಅವರು ಸ್ಪಷ್ಟಪಡಿಸಿದರು.
ಈ ಭಾಗದಲ್ಲಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ರೈತರ ಬಿಕ್ಕಟ್ಟನ್ನು ಪರಿಹರಿಸಲು ಜಿಲ್ಲಾ ಮತ್ತು ರಾಜ್ಯ ಮಟ್ಟದ ನಾಯಕರು ಯಾವ ರೀತಿ ಆಕ್ರಮಣಕಾರಿಯಾಗಿ ಹೋರಾಟ ನಡೆಸಬೇಕು ಎಂಬುದರ ಕುರಿತು ಪಕ್ಷದ ಕೋರ್ ಕಮಿಟಿ ಸಭೆಯಲ್ಲಿ ಸ್ಪಷ್ಟ ನೀಲನಕ್ಷೆಯನ್ನು ರೂಪಿಸಲಾಗುವುದು ಎಂದು ಬಿಜೆಪಿ ರಾಜ್ಯ ಅಧ್ಯಕ್ಷರು ಭರವಸೆ ನೀಡಿದರು.

# ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ,ಪರಂಪರೆಯ ಅಸ್ಮಿತೆಯಿರಲಿ



**ಕಲಬುರಗಿ,ಜು.13:** ನಗರದ ಶರಣಬಸವ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಿದ ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತದಜಿಲ್ಲಾ ಕಾರ್ಯಕಾರಿಣಿ ಪದಗ್ರಹಣ ಸಭೆ ಉದ್ಘಾಟಿಸಿ, ರಾಷ್ಟ್ರದ ಅಭಿವೃದ್ಧಿ ಮತ್ತು ಮಕ್ಕಳ ಸರ್ವಾಂಗೀಣ ವಿಕಾಸವಾಗಬೇಕಾದರೆ,ಶಿಕ್ಷಣದಲ್ಲಿ ಭಾರತೀಯತೆ ತರುವುದರಿಂದ ಮಾತ್ರ ಸಾಧ್ಯವೆಂದು ಭಾರತೀಯ ಶಿಕ್ಷಣ ಮಂಡಲದ ಕರ್ನಾಟಕ ಉತ್ತರ ಪ್ರಾಂತ ಉಪಾಧ್ಯಕ್ಷ ಪ್ರೊ. ಬಸವರಾಜ ಡೊಣೂರು ಹೇಳಿದರು.
ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಅಸ್ಮಿತೆಯಿರಲಿ ಎಂದು ಹೇಳಿದರು. ಪ್ರತಿಯೊಬ್ಬ ಭಾರತೀಯ, ನಡೆನುಡಿಯಲ್ಲಿ ತನ್ನ ದೇಶದ ಜೀವನ ವಿಧಾನವನ್ನು ಅಳವಡಿಸಿಕೊಳ್ಳಬೇಕು, ದೇಶದ ಸಾಂಸ್ಕೃತಿಕ ವೈಭವವನ್ನು ಎತ್ತಿ ಹಿಡಿಯಬೇಕು.ದೇಶದ ಅಭಿವೃದ್ಧಿ ದೃಷ್ಟಿಯಿಂದ ಮತ್ತು ಮಕ್ಕಳ ಸರ್ವಾಂಗೀಣ ವಿಕಾಸಕ್ಕಾಗಿ ಪಾಲಕರು, ಶಿಕ್ಷಕರು ಮತ್ತು ಸಂಸ್ಥಾಚಾಲಕರು,ಸಾಮಾಜಿಕ ಸಂಘಟನೆಗಳು ಪರಸ್ಪರ ಪೂರಕವಾಗಿ ಕಾರ್ಯ ನಿರ್ವಹಿಸಬೇಕು ಎಂದರು.
ಈ ಸಭೆಯ ಅಧ್ಯಕ್ಷತೆ ವಹಿಸಿದ ಭಾರತೀಯ ಶಿಕ್ಷಣ ಮಂಡಲದ ಜಿಲ್ಲಾಧ್ಯಕ್ಷರಾದ ಬಸವರಾಜ ದೇಶಮುಖ ಅವರು ಮಾತನಾಡಿಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಗೆ ನಾವೆಲ್ಲರೂ ಕೈಜೋಡಿಸೋಣ. ಹಾಗೂ ಎಸ್. ಎಸ್. ಎಲ್. ಸಿ ಮತ್ತು ಪಿ. ಯು. ಸಿವಿದ್ಯಾರ್ಥಿಗಳಲ್ಲಿ ಇರುವ ಪರೀಕ್ಷಾ ಭಯ ಹೋಗಲಾಡಿಸಲು ಮುಂದಿನ ದಿನಗಳಲ್ಲಿ ವಿದ್ಯಾರ್ಥಿ ಗಳಲ್ಲಿ ಆತ್ಮಸ್ಥೈರ್ಯ ತುಂಬುವಕಾರ್ಯಕ್ರಮ ಮತ್ತು ಕಾರ್ಯಗಾರಗಳನ್ನು ಆಯೋಜಿಸೋಣವೆಂದರು.

ಒತ್ತಡಮುಕ್ತ ಶೈಕ್ಷಣಿಕ ವಾತಾವಾರಣದಿಂದ ಮಾತ್ರ ಮಕ್ಕಳ ಸರ್ವಾಂಗೀಣ ವಿಕಾಸ ಸಾಧ್ಯ. ತಾಯಿ ಗರ್ಭದಿಂದಲೇ ಮಕ್ಕಳ ಶಿಕ್ಷಣಆರಂಭವಾಗುವುದು. ಹೀಗಾಗಿ ಶಿಕ್ಷಣ ಮತ್ತು ಸಂಸ್ಕಾರ ನೀಡುವಲ್ಲಿ ತಾಯಂದಿರ ಪಾತ್ರ ದೊಡ್ಡದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಭಾರತೀಯ ಶಿಕ್ಷಣ ಮಂಡಲದ ಪ್ರಾಂತ ಸಹ ಕಾರ್ಯದರ್ಶಿ, ಡಾ. ಪಲ್ಲವಿ ಪಾಟೀಲ ಸೇಡಂ ಅವರು ರಾಷ್ಟ್ರದ ಅಭಿವೃದ್ಧಿಯಲ್ಲಿ ಶಿಕ್ಷಕರ ಪಾತ್ರ ಅಮೂಲ್ಯ ವಾದದ್ದು, ಶಿಕ್ಷಕ ವಿಷಯ ಶಿಕ್ಷಕನಾಗದೆ, ಗುರುವಾಗುವಡೆಗೆಸಾಗಬೇಕು ಎಂದರು ಭಾರತೀಯ ಶಿಕ್ಷಣ ಮಂಡಲ ಜಿಲ್ಲಾ ಉಪಾಧ್ಯಕ್ಷ ಶಿವಾನಂದ ಖಜೂರಿ ಎಂದುಕಳವಳ ವ್ಯಕ್ತಪಡಿಸಿದರು. ಶಿಕ್ಷಣದಲ್ಲಿ ಭಾರತೀಯ ತರುವುದೆಂದರೆ, ಸ್ಥಳೀಯ ಕಲೆ, ಸಂಗೀತ,ಸಾಹಿತ್ಯ ಜಾನಪದ, ಭಾರತೀಯಯೋಗಮಯ ಜೀವನ ಶೈಲಿ ಪ್ರತಿಯೊಂದರಲ್ಲು ಭಾರತೀಯತೆ ಎದ್ದು ಕಾಣಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತದ ಅನುಸಂಧಾನ ಗತಿವಿಧಿ ಪ್ರಾಂತ ಪ್ರಮುಖರಾದ ಪ್ರೊ.ರವೀಂದ್ರ ಹೆಡಗಿ , ಜಿಲ್ಲಾ ಉಪಾಧ್ಯಕ್ಷೆ ಡಾ. ಲಕ್ಷ್ಮೀ ಪಾಟೀಲ ಮಾಕಾ, ಜಿಲ್ಲಾ ಉಪಾಧ್ಯಕ್ಷ ಡಾ. ಉದಯ ಪಾಟೀಲ, ಡಾ. ಮಹೇಶತನವಾಡೆ, ಡಾ. ಬಾಲಾಜಿ ಬಿರಾದಾರ, ನಿಶಾ ಜೋಶಿ, ಸಂಗಣ್ಣ ಕೆ. ,ಡಾ. ನಾಗಬಸವಣ್ಣ ಗುರಾಗೋಳ ,ಪ್ರೊ. ಭಾರತಿ ಹರಸೂರ್,ಪ್ರೊ ಸುವರ್ಣಾ ನಂದ್ಯಾಳ, ಡಾ. ಜಗದೀಶ್ ಬಿರಾದಾರ, ಶಶಿಕಲಾ ಬಿ. ಎಸ್.. ಮಳಯ್ಯ ಹಿರೇಮಠ, ಡಾ. ವಿಜಯಕುಮಾರಉಪಸ್ಥಿತರಿದ್ದರು.

ಪ್ರಾಂತ ವಿದ್ಯಾಲಯ ಗತಿವಿಧಿ ಪ್ರಮುಖ ಶರಣು ಉದನೂರ ನಿರೂಪಿಸಿದರು. ಡಾ. ಶರಭಯ್ಯ ಸ್ವಾಮಿ ಪರಿಚಯಸಿ ಸ್ವಾಗತಿಸಿದರು.ಡಾ. ಉದಯ ಪಾಟೀಲ ವಂದಿಸಿದರು.

# ಅಪಘಾತ:ಮೂವರು ಬೈಕ್ ಸವಾರರ ಸಾವು

**ಕಲಬುರಗಿ,ಜು.13–** ಬೈಕ್ ಮೇಲೆ ಪಾಣೆಗಾಂವ ಗ್ರಾಮಕ್ಕೆ ಹೋಗುತ್ತಿದ್ದಾಗ ಬೈಕ್ ಸವಾರರು ಆಯ ತಪ್ಪಿ ಕಲ್ಲಿಗೆ ಡಿಕ್ಕಿ ಹೊಡೆದು ಮೂವರು ಬೈಕ್ ಸವಾರರು ಸ್ಥಳದಲ್ಲೇ ಮೃತಪಟ್ಟ ಘಟನೆ ಪಾಣೇಗಾಂವ ಹತ್ತಿರ ಇಂದು ಬೆಳಗಿನಜಾವ ನಡೆದಿದೆ.
ಮೃತರನ್ನು ಪಾಣೇಗಾಂವ ತಾಂಡಾದ ಸುಂದರ್ ಹರಿಶ್ಚಂದ್ರ ರಾಠೋಡ್ (36), ಧರ್ಮರಾಜ ರಾಜು ಚವ್ಹಾಣ್ (31) ಮತ್ತು ಅನಿಲ್ ಗೋಪಾಲ ಪವಾರ್ (35) ಎಂದು ಗುರುತಿಸಲಾಗಿದೆ.
ಈ ಮೂವರು ಬೈಕ್ ಮೇಲೆ ಪಾಣೇಗಾಂವ ತಾಂಡಾಕ್ಕೆ ಹೋಗುತ್ತಿದ್ದಾಗ ಯಾವುದೋ ಅಪರಿಚಿತ ವಾಹನ ಡಿಕ್ಕಿ ಹೊಡೆದು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.
ಸುದ್ದಿ ತಿಳಿದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ, ಡಿಸಿಪಿ ಶಾಲೂ, ಸಂಚಾರಿ ಪೊಲೀಸ್ ಠಾಣೆ ಪಿಐ ಶಕೀಲ್ ಅಂಗಡಿ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.
ಸಂಚಾರಿ ಪೊಲೀಸ್ ಠಾಣೆ–1ರಲ್ಲಿ ಪ್ರಕರಣ ದಾಖಲಾಗಿದೆ.



Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE